ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com ಸಂಪುಟ: 01 ಸಂಚಿಕೆ: 145
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ವಾರ: 16-05-2026

# ಪೆಟ್ರೋಲ್- ಡೀಸೆಲ್ ದರ ದುಬಾರಿ

**ನವದೆಹಲಿ,ಮೇ.15-** ಪಶ್ಚಿಮ ಏಷ್ಯಾ ಸಂಘರ್ಷದಿಂದ ಉಂಟಾದ ಜಾಗತಿಕ ಕಚ್ಚಾ ತೈಲ ಬೆಲೆ ಏರಿಕೆಯಿಂದ ದೇಶಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಲೀಟರ್‌ಗೆ ತಲಾ 3 ರೂ. ಹೆಚ್ಚಿಸಲಾಗಿದೆ. ಈ ಮೂಲಕ ಗ್ರಾಹಕರ ಜೇಬಿಗೆ ಕತ್ತರಿ ಬಿದ್ದಿದೆ

ಮಧ್ಯಪ್ರಾಚ್ಯದಲ್ಲಿ ಸಂಘರ್ಷದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಪೆಟ್ರೋಲ್- ಡೀಸೆಲ್ ಮಿತವಾಗಿ ಬಳಸಿ, ಸಾರ್ವಜನಿಕ ಸಾರಿಗೆ ಬಳಸುವಂತೆ ಮನವಿ ಮಾಡಿದ ಬೆನ್ನಲ್ಲೇ ಪೆಟ್ರೋಲ್- ಡೀಸೆಲ್ ದರ ಏರಿಕೆಯಾಗಿದೆ. ಪರಿಷ್ಕೃತ ದರಗಳು ಇಂದಿನಿಂದಲೇ ಜಾರಿಯಾಗಿದೆ. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಶ್ರೀಸಾಮಾನ್ಯನಿಗೆ ಪೆಟ್ರೋಲ್, ಡೀಸೆಲ್ ದರ ಏರಿಕೆ ಮತ್ತಷ್ಟು ಬರೆ ಹಾಕಿದಂತಾಗಿದೆ.

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಯ ನಡುವೆ ಸಿಎನ್‌ಜಿ ಬೆಲೆಯಲ್ಲಿ ಕೂಡ 2 ರೂಪಾಯಿ ಏರಿಕೆಯಾಗಿದೆ. ಹೊಸ ದರ ಪರಿಷ್ಕರಣೆಯಿಂದ ಬೆಂಗಳೂರಿನಲ್ಲಿ ಪ್ರತಿ ಲೀಟರ್ ಪೆಟ್ರೋಲ್ ಬೆಲೆ 16.17 ರೂ. ಆಗಿದ್ದು, ಡೀಸೆಲ್ ಬೆಲೆ 94.10 ರೂ. ಆಗಿದೆ. ದೆಹಲಿಯಲ್ಲಿ ಪೆಟ್ರೋಲ್ ಬೆಲೆ ಲೀಟರ್‌ಗೆ 94.77 ರೂ.ಗಳಿಂದ 97.77 ರೂ.ಗಳಿಗೆ ಮತ್ತು ಡೀಸೆಲ್ ದರ ಲೀಟರ್‌ಗೆ 87.67 ರೂ.ಗಳಿಂದ 90.67 ರೂ.ಗಳಿಗೆ ಏರಿಕೆಯಾಗಿದೆ

ಇತರ ಮಹಾನಗರಗಳಲ್ಲಿಯೂ ಪೆಟ್ರೋಲ್ ಬೆಲೆಗಳನ್ನು ಪರಿಷ್ಕರಿಸಲಾಗಿದ್ದು, ಕೋಲ್ಕತ್ತಾದಲ್ಲಿ ಲೀಟರ್‌ಗೆ 108.74 ರೂ., ಮುಂಬೈನಲ್ಲಿ 106.68 ರೂ. ಮತ್ತು ಚೆನ್ನೈನಲ್ಲಿ 103.67 ರೂ. ತಲುಪಿದ್ದು, ಪ್ರತಿ ಲೀಟರ್‌ಗೆ 2.83 ರಿಂದ 3.29 ರೂ.ಗಳವರೆಗೆ ಏರಿಕೆಯಾಗಿದೆ.

ಡೀಸೆಲ್ ಬೆಲೆಗಳು ಸಹ ಮಹಾನಗರಗಳಲ್ಲಿ ತೀವ್ರ ಏರಿಕೆ




ಕಂಡಿದ್ದು, ಕೋಲ್ಕತ್ತಾದಲ್ಲಿ ಲೀಟರ್‌ಗೆ 95.13 ರೂ., ಮುಂಬೈನಲ್ಲಿ 93.14 ರೂ. ಮತ್ತು ಚೆನ್ನೈನಲ್ಲಿ 95.25 ರೂ.ಗಳಿಗೆ ಏರಿದೆ.

ದೆಹಲಿಯಲ್ಲಿ ಸಿಎನ್‌ಜಿ ಬೆಲೆಗಳನ್ನು ಕೆಜಿಗೆ 2 ರೂ.ಗಳಷ್ಟು ಹೆಚ್ಚಿಸಲಾಗಿದೆ. ನಿನ್ನೆಯವರೆಗೆ 85 ರೂ.ಗಳಷ್ಟಿದ್ದ ದರ ಈಗ ಇದು 87 ರೂ.ಗಳಿಗೆ ಏರಿದೆ.
ಜಾಗತಿಕ ಮಟ್ಟದಲ್ಲಿ ಕಚ್ಚಾ ತೈಲ ಬೆಲೆಗಳು ಏರುತ್ತಿರುವ ಮತ್ತು ಪಶ್ಚಿಮ ಏಷ್ಯಾದಲ್ಲಿ ಹದಗೆಡುತ್ತಿರುವ ಪರಿಸ್ಥಿತಿ ಹೊರತಾಗಿಯೂ ಭಾರತ ಇಲ್ಲಿಯವರೆಗೆ ಚಿಲ್ಲರೆ ಇಂಧನ ಬೆಲೆಗಳಲ್ಲಿ ಪ್ರಮುಖ ಏರಿಕೆ ಮಾಡಿರಲಿಲ್ಲ. ಇದೀಗ ಏಕಾಏಕಿ ಮೂರು ರೂಪಾಯಿ ಹೆಚ್ಚಿಸಿದೆ.

ಸರ್ಕಾರಿ ಸ್ವಾಮ್ಯದ ತೈಲ ಮಾರುಕಟ್ಟೆ ಕಂಪನಿಗಳು ಸುಮಾರು 11 ವಾರಗಳ ಕಾಲ ಚಿಲ್ಲರೆ ಇಂಧನ ಬೆಲೆ ಸ್ಥಿರವಾಗಿರಿಸಿದ್ದವು, ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ಅನುಭವಿಸುತ್ತಿರುವ ನಷ್ಟ ಸರಿದೂಗಿಸಲು ಅನಿವಾರ್ಯವಾಗಿ ಪೆಟ್ರೋಲ್- ಡೀಸೆಲ್ ದರ ಹೆಚ್ಚಿಸಲಾಗಿದೆ.ಲೋಕಸಭಾ ಚುನಾವಣೆಗೆ ಮುನ್ನ ಮಾರ್ಚ್ 2024 ರಲ್ಲಿ ಘೋಷಿಸಲಾದ ಒಂದು ಬಾರಿ ಲೀಟರ್‌ಗೆ 2 ರೂ. ಕಡಿತ ಹೊರತುಪಡಿಸಿ, ಏಪ್ರಿಲ್ 2022 ರಿಂದ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಮಾಡಿರಲಿಲ್ಲ.

ರಷ್ಯಾ ಉಕ್ರೇನ್ ವಿರುದ್ಧದ ಯುದ್ಧದಿಂದ ಉಂಟಾದ ಜಾಗತಿಕ ತೈಲ ಆಘಾತದಿಂದ ಗ್ರಾಹಕರನ್ನು ರಕ್ಷಿಸಲು ಇಂಡಿಯನ್ ಆಯಿಲ್ ಕಾರ್ಪೋರೇಷನ್, ಭಾರತ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್ ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್ ಏಪ್ರಿಲ್ 2022 ರಲ್ಲಿ ದೈನಂದಿನ ಇಂಧನ ಬೆಲೆ ಪರಿಷ್ಕರಣೆಗಳನ್ನು ಸ್ಥಗಿತಗೊಳಿಸಿದವು. ಆರಂಭದಲ್ಲಿ ಮೂರು ಸಂಸ್ಥೆಗಳು ಭಾರೀ ನಷ್ಟವನ್ನು ಅನುಭವಿಸಿದರೂ, ಕಚ್ಚಾ ಬೆಲೆಗಳು ಕಡಿಮೆಯಾದಾಗ ಅವು ಸ್ವಲ್ಪ ಮಟ್ಟಿಗೆ ಚೇತರಿಸಿಕೊಂಡವು.

ಪಶ್ಚಿಮ ಏಷ್ಯಾದಲ್ಲಿನ ಹೊಸ ಸಂಘರ್ಷ ಮತ್ತೊಮ್ಮೆ ಜಾಗತಿಕ ಇಂಧನ ಬೆಲೆಗಳನ್ನು ತೀವ್ರವಾಗಿ ಹೆಚ್ಚಿಸಿದೆ. ಸಂಘರ್ಷ ಉಲ್ಬಣಗೊಳ್ಳುವ ಮೊದಲು ಫೆಬ್ರವರಿಯಲ್ಲಿ ಬ್ಯಾರೆಲ್‌ಗೆ ಸರಾಸರಿ 69 ಡಾಲರ್ ನಷ್ಟಿದ್ದ ಭಾರತದ ಆಮದು ಬ್ಯಾರೆಲ್‌ಗೆ ಸುಮಾರು 113-114 ಡಾಲರ್‌ಗೆ ಏರಿಯಾಗಿದೆ.

ದೇಶಾದ್ಯಂತ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ
ಪೆಟ್ರೋಲ್, ಡೀಸೆಲ್ ತಲಾ ಮೂರು ಹೆಚ್ಚಳ
ಸಿಎನ್‌ಜಿ ಬೆಲೆಯಲ್ಲಿ 2 ರೂಪಾಯಿ ಏರಿಕೆ
ವಾಹನ ಸವಾರರ ಬೇಬಿಗೆ ಮತ್ತಷ್ಟು ಹೊರೆ

## ಎನ್.ಟಿ.ಎ ರದ್ದುಗೊಳಿಸುವಂತೆ ಆಗ್ರಹಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ಪ್ರತಿಭಟನೆ.




**ಬಳ್ಳಾರಿ, ಮೇ.15:** ನೀಟ್-ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆಯ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದುಗೊಳಿಸಲಾಗಿದ್ದು, ಈ ಕೂಡಲೇ ಪ್ರಶ್ನೆ ಪತ್ರಿಕೆ ಸೋರಿಕೆಗೆ ಕಾರಣರಾದವರಿಗೆ ನಿದರ್ಶನೀಯ ಶಿಕ್ಷೆ ವಿಧಿಸಬೇಕು ಹಾಗೂ ಎನ್‌ಟಿಎ (ರಾಷ್ಟ್ರೀಯ ಪರೀಕ್ಷಾ ಸಂಸ್ಥೆ) ಯನ್ನು ರದ್ದುಗೊಳಿಸಬೇಕು ಎಂದು ಆಗ್ರಹಿಸಿ ಬಳ್ಳಾರಿಯ ಸಂಗಮ್ ಸರ್ಕಲ್ ಹತ್ತಿರ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಎಐಡಿಎಸ್‌ಓ ರಾಜ್ಯ ಖಜಾಂಚಿ ಸುಭಾಷ್ ಬೆಟ್ಟದ ಕೊಪ್ಪ ಮಾತನಾಡಿ, "ಪದೇ ಪದೇ ಮರುಕಳಿಸುತ್ತಿರುವ ನೀಟ್ ನೀಟ್ ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ಕೇವಲ ಒಂದು ಪರೀಕ್ಷಾ ಸಂಸ್ಥೆಯ ವೈಫಲ್ಯವಲ್ಲ; ಇದು ಲಕ್ಷಾಂತರ ಪ್ರಾಮಾಣಿಕ ವಿದ್ಯಾರ್ಥಿಗಳ ಬೆವರು ಮತ್ತು ಕನಸುಗಳ ಮೇಲೆ ಎಸಗುತ್ತಿರುವ ಘೋರ ದೌರ್ಜನ್ಯವಾಗಿದೆ. ಕೇವಲ ಮೂರು ವರ್ಷಗಳಲ್ಲಿ ಎರಡನೇ ಬಾರಿಗೆ ವೈದ್ಯಕೀಯ ಶಿಕ್ಷಣದ ಕನಸು ಹೊತ್ತವರ ಆಶೋತ್ತರಗಳನ್ನು ಅತಿ ಹೆಚ್ಚು ಹಣ ನೀಡುವವರಿಗೆ ಹರಾಜು ಹಾಕಲಾಗಿದೆ. ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ( ಎನ್‌ಟಿಎ ) 'ಕೋಚಿಂಗ್ ಮಾಫಿಯಾ'ದ ಕೈಗೊಂಬೆಯಂತೆ ವರ್ತಿಸುತ್ತಿರುವುದು ಇಡೀ ವ್ಯವಸ್ಥೆಯ 2ನೇಪುಟಕ್ಕೆ►

## ಪಟ್ಟಣದ ಅಗ್ನಿಶಾಮಕ ಇಲಾಖೆಯ ಸಿಬ್ಬಂದಿಯ ಉತ್ತಮ ಸೇವೆಗಾಗಿ ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಶು ಗಿರಿಯವರಿಂದ ಸನ್ಮಾನ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಅಗ್ನಿಶಾಮಕ ಇಲಾಖೆಯ ಸಿಬ್ಬಂದಿಗಳು ಜಿಲ್ಲೆಯ ಸಿಂಧನೂರು ನಗರದಲ್ಲಿ ಮೇ.3 ರಂದು ವಿಧಾನಪರಿಷತ್ ಸದಸ್ಯರಾದ ಬಸವನಗೌಡ ಬಾದರ್ಲಿ ನೇತೃತ್ವದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಉಪಸ್ಥಿತಿಯಲ್ಲಿ ನಡೆದ ಸಾಮೂಹಿಕ ವಿವಾಹ ಹಾಗೂ ಸುಮಂಗಲಿಯರಿಗೆ ಉಡಿತುಂಬುವ ಕಾರ್ಯಕ್ರಮದ ವೇದಿಕೆ ಸ್ಥಳದಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಉಂಟಾದ ಅಗ್ನಿ ಅವಘಡವನ್ನು ಕೇಲವೆ ಕ್ಷಣಗಳಲ್ಲಿ ಬೆಂಕಿಯನ್ನು ನಂದಿಸಿ ಸಾರ್ವಜನಿಕರಿಗೆ ಹಾಗೂ ಗಣ್ಯರಿಗೆ ಯಾವುದೆ ಹಾನಿಯುಂಟಾಗದಂತೆ ಉತ್ತಮವಾಗಿ ಕರ್ತ್ಯವ್ಯ ನಿರ್ವಹಿಸಿದ ಅಗ್ನಿಶಾಮಕ ಠಾಣೆಯ ಸಹಾಯಕ ಅಗ್ನಿ ಸುರಕ್ಷತಾ ಅಧಿಕಾರಿ ಖಾಜಹುಸೇನ್,ಹಾಗೂ ಸಿಬ್ಬಂದಿಗಳಾದ ತಿರುಪತಿ, ರಾಜಸಾಬ್,ಮಂಜುನಾಥ,ನಾಗರಾಜ, ಅಮರಯ್ಯ,ಸಚೀನ್ ರವರನ್ನು ರಾಯಚೂರಿನಲ್ಲಿ ಜಿಲ್ಲಾ ಪೊಲೀಸ್ ಇಲಾಖೆಯಿಂದ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಅರುಣಾಂಗ್ಶು ಗಿರಿಯವರು ಸನ್ಮಾನಿಸಿ ಗೌರವಿಸಿ ನಿಮ್ಮ ಕರ್ತವ್ಯ ಇತರಿಗೆ ಸ್ಫೂರ್ತಿಯಾಗಲಿ ಎಂದು ಹಾರೈಸಿದರು.

## ಮೇ.17 ರಂದು ಯುವಜನ ಬಳಗ ಮಾನ್ವಿ ವತಿಯಿಂದ ಕೃತಿಗಳ ಲೋಕಾರ್ಪಣೆ ಕಾರ್ಯಕ್ರಮ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಯುವಜನ ಬಳಗ ಮಾನ್ವಿ ವತಿಯಿಂದ ಮೇ.17 ರಂದು ಬೆಳಿಗ್ಗೆ 10ಕ್ಕೆ ಪಟ್ಟಣದ ಗ್ಯಾಲಕ್ಷಿ ಫಂಕ್ಷನ್ ಹಾಲ್ ನಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದಿಂದ ಪ್ರೋತ್ಸಾಹಧನ ಪಡೆದ ಯುವ ಕವಿಗಳ ಚೊಚ್ಚಲಕೃತಿಗಳಾದ ಸುಪ್ರೀತಾ ಕೆ.ಆರ್. ರವರ ಸವಿಭಾವಬಂಧ ಭಾವಗೀತೆಗಳ ಕೃತಿ ಹಾಗೂ ಗುಂಡಪ್ಪ ರಾಠೋಡ್ ರವರ ಕಲ್ಲುಖಾರದ ಗಲಾಟೆ ಕವನ ಸಂಕಲನಗಳ ಕೃತಿಗಳ ಲೋಕಾರ್ಪಣೆ, ಹಾಗೂ ಕವಿಗೋಷ್ಠಿ ,ಅಭಿನಂದನಾ ಸಮಾರಂಭ ಕಾರ್ಯಕ್ರಮವನ್ನು ಮಾಜಿ ಕಸಾಪ ಅಧ್ಯಕ್ಷರಾದ ಮೂಕಪ್ಪ ಕಟ್ಟಿಮನಿ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಡಾ.ದಸ್ತೆಯಾದ್ ಮಿನ್ಹಾಜ್ ಉಲ್ ಹಸನ್ ಸಹಿಸಲಿದ್ದು. ವಿಜಯವಾಣಿ ಪತ್ರಿಕೆಯ ಹಿರಿಯ ಉಪ ಸಂಪಾದಕರಾದ ಆಶೋಕ ನೀಮಕರ್ ಕೃತಿಗಳ ಲೋಕಾರ್ಪಣೆಯನ್ನು ನೆರವೇರಿಸಲಿದ್ದಾರೆ. ಕವಿಗೋಷ್ಠಿಯ ಅಧ್ಯಕ್ಷತೆಯನ್ನು ಸಾಹಿತಿ ಡಾ.ಬಸವರಾಜ ಸುಂಕೇಶ್ವರ ವಹಿಸಲಿದ್ದಾರೆ, ಡಾ.ಕೆ. ಖಾದರ್ ಬಾಷಾ ರಿಂದ ವಿಶೇಷ ಉಪನ್ಯಾಸ ,ಹಿರಿಯ ವರದಿಗಾರರಾದ ಪಿ.ಪರಮೇಶ ರವರಿಗೆ ವಿಶೇಷ ಸನ್ಮಾನ, ತಾಲೂಕಿನ ವಿವಿಧ ಕವಿಗಳಿಂದ ಕವಿಗೋಷ್ಠಿ ನಡೆಯಲಿದೆ ಎಂದು ಯುವಜನ ಬಳಗ ಮಾನ್ವಿ ಸಂಚಾಲಕರಾದ ಡಾ.ಸೈಯಾದ್ ಮುಜೀಬ್ ಅಹ್ಮದ್ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಡಾ.ಫಾರುಕ್ ಮಣ್ಣೂರ ಶಿಘ್ರದಲ್ಲಿಯೆ ಖರ್ಗೆ ನೇತೃತ್ವದಲ್ಲಿ ಕಾಂಗ್ರೆಸ್ ಸೇರ್ಪಡೆ: ಜಗದೇವ ಗುತ್ತೇದಾರ

**ಕಲಬುರಗಿ,ಮೇ.15-**ಮಣ್ಣೂರ ಮಲ್ಟಿಸ್ಪೇಷಾಲಿಟಿ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಫಾರುಕ್ ಮಣ್ಣೂರ ಅವರು ಕಡಿಮೆ ಅವಧಿಯಲ್ಲಿ ಚಿಕಿತ್ಸೆ ಮೂಲಕ ಹಾಗೂ ಸಮಾಜ ಸೇವೆ ಮೂಲಕ ಕಡಿಮೆ ಅವಧಿಯಲ್ಲಿ ಜನರ ವಿಶ್ವಾಸ ಸಂಪಾದನೆ ಮಾಡಿದ್ದಾರೆ ಶಿಘ್ರದಲ್ಲಿಯೆ ದಿನಾಂಕ ನಿಗದಿ ಮಾಡಿ ಡಾ. ಫಾರುಕ್ ಮಣ್ಣೂರ ಅವರಿಗೆ ಸಚಿವ ಪ್ರಿಯಾಂಕ ಖರ್ಗೆ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡು ಪಕ್ಷದಲ್ಲಿ ಒಳ್ಳೆ ಸ್ಥಾನ ನೀಡುತ್ತೇವೆ ಎಂದು ಎಮ್.ಎಲ್.ಸಿ ಹಾಗೂ ಜಿಲ್ಲಾ ಕಾಂಗ್ರೇಸ್ ಸಮಿತಿ ಅಧ್ಯಕ್ಷರಾದ ಜಗದೇವ ಗುತ್ತೇದಾರ ಅವರು ಹೇಳಿದ್ದರು.
ಕಲಬುರಗಿ ನಗರದಲ್ಲಿ ಡಾ. ಫಾರುಕ ಮಣ್ಣೂರ ಅಭಿಮಾನಿ ಬಳಗದಿಂದ ಡಾ.ಫಾರುಕ್ ಮಣ್ಣೂರ ಅವರ 39ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ಸೇವಾ ಸಂಕಲ್ಪ ದೀವಸ ಕಾರ್ಯಕ್ರಮಕ್ಕೆ




ಚಾಲನೆ ನೀಡಿ ಮಾತನಾಡಿ ನಿಮ್ಮಂತವರು ಜನಪರ, ಬಡವರ ಪರ , ಹಿಂದೂಳಿದವರ ಪರ ಕಾಳಜಿವುಳ್ಳವರು ರಾಜಕೀಯಕ್ಕೆ ಬಂದರೆ ಜನರಿಗೆ ಸಾಮಜಿಕ ನ್ಯಾಯ ನೀಡಲು ಸಾಧ್ಯ, ಕಾಂಗ್ರೆಸ್ ಪಕ್ಷದ ಸಿದ್ದಾಂತ ಕೂಡ ಬಡವರ ಪರಾಗಿದ್ದು 2ನೇಪುಟಕ್ಕೆ►

## ಮಂತ್ರಾಲಯ ಶ್ರೀಗಳಿಂದ ತೇರಿನ ಮನೆ ಉದ್ಘಾಟನೆ 6000 ಮೂರ್ತಿ ಪ್ರತಿಷ್ಠಾಪನೆ ಮಾಡಿದ ಏಕೈಕ ಸಂತ ಪಂಚಾಕ್ಷರಿ ಶಿವಾಚಾರ್ಯರಾಗಿದ್ದಾರೆ -ಮಂತ್ರಾಲಯ ಶ್ರೀ

ಧೈರ್ಯದ ದಾರಿ



ಸಿರವಾರ.ಮೇ.15- ನಾಡಿನಾದ್ಯಂತ 6000 ಶಿಲೆಗಳು ಪೂಜಿಸುತ್ತಿವೆ ಎಂದರೆ ಅದು ಡಾ.ಪಂಚಾಕ್ಷರಿ ಶಿವಾಚಾರ್ಯರಿಂದ,ನಾಡಿನ ಏಕೈಕ ಸಂತರಾಗಿದ್ದಾರೆ. ಅವರನ್ನು ಪಡೆದ ನೀವುಗಳ ಧನ್ಯರು ಎಂದು ಮಂತ್ರಾಲಯ ರಾಘವೇಂದ್ರ ಸ್ವಾಮಿಗಳ ಮಠದ ಪೀಠಧಿಪತಿಗಳಾದ ಶ್ರೀ ಪ. ಪೂ. ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಹೇಳಿದರು. ಸಮೀಪದ ಶ್ರೀ ಕ್ಷೇತ್ರ ನೀಲಗಲ್ - ಗಣೇಕಲ್ ನ ಶ್ರೀ ಶಾಂಭವಿ ಸಂಸ್ಥಾನ ಮಠದ ಶ್ರೀ ಪ. ಪೂ ಷ. ಬ್ರ. ಡಾ. ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳ 76ನೇ ಜನ್ಮವರ್ದಂತಿ ಮತ್ತು ನೂತನ ತೇರಿನ ಮನೆ ಉದ್ಘಾಟನೆಯನ್ನು ನೇರವೆರಿಸಿದ ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು ನಾಡಿನ ಉದ್ದಗಲ ಕಾಲ್ನಡಿಯಲ್ಲಿ ಸಂಚಾರ ಮಾಡಿ 6000 ಸಾವಿರಕ್ಕೂ ಮೂರ್ತಿ ಪ್ರತಿಷ್ಠಾಪನೆ,ಪ್ರಾಣಪ್ರತಿಷ್ಠಾಪನೆ ಮಾಡಿದ ಏಕೈಕ ಶ್ರೀಗಳು ಎನಿಸಿದ್ದಾರೆ. ಸನಾತನ ಧರ್ಮದ ಏಳಿಗೆಗಾಗಿ ಜೀವನವನ್ನೆ ಮುಡಿಪಾಗಿ ಇಟ್ಟಿದ್ದಾರೆ. ತಮ್ಮ ಸರಳತೆಯ ಮುಖಾಂತರ ಭಕ್ತರ ಮನಸ್ಸು ಗೆದ್ದಿದ್ದಾರೆ. ಇದೆ ಹಾದಿಯಲ್ಲಿ ಶ್ರೀ ಮಠದ ಕಿರಿಯ ಶ್ರೀಗಳಾದ ಪೂಜ್ಯ ಷ. ಬ್ರ. ಅಭಿನವ ರೇಣುಕ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ಶ್ರೀ ಮಠದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಇಬ್ಬರಿಂದ ಮಠದ ಕೀರ್ತಿ ದೇಶ್ಯಾದ್ಯಂತ್ಯ ಬೆಳೆಯಲಿ, ಶ್ರೀಗಳು 100 ವರ್ಷಕೂ ಹೆಚ್ಚು ದಿನ ಆಯುಷ್ಯ, ಆರೋಗ್ಯದಿಂದ ಇದ್ದೂ, ನಮ್ಮೆಲ್ಲರಿಗೂ ಬೆಳಕಾಗಿ ಮುನ್ನಡೆಸುವಂತಾಗಲಿ ಎಂದು ಹೇಳಿದರು. ಡಾ.ಪಂಚಾಕ್ಷರಿ ಶಿವಾಚಾರ್ಯ ಸಾನಿದ್ಯ 2ನೇಪುಟಕ್ಕೆ

## ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿದ್ಯಾರ್ಥಿಗಳ ಭವಿಷ್ಯ ಅತಂತ್ರ ಖಂಡನೀಯ: ನಜೀರುದ್ದೀನ್ ಖಾದ್ರಿ

ಧೈರ್ಯದ ದಾರಿ

**ಮಾನ್ವಿ:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಿಂದಾಗಿ ದೇಶದಲ್ಲಿ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಅತಂತ್ರವಾಗಿದ್ದು ಕೂಡಲೇ ಕೇಂದ್ರ ಸರ್ಕಾರ ತಪಿಸ್ತರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಪುರಸಭೆಯ ಮಾಜಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಸೈಯದ್ ನಜೀರುದ್ದೀನ್ ಖಾದ್ರಿ ಆಗ್ರಹಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು 2026-27 ನೇ ಸಾಲಿನ ವೈದ್ಯಕೀಯ ಪ್ರವೇಶಕ್ಕಾಗಿ ಇತ್ತೀಚೆಗೆ ನಡೆದ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆಯಲ್ಲಿ ಅಕ್ರಮ ನಡೆದಿರುವುದು ವಿಷಾದನೀಯ. ಕಳೆದ ಕೆಲ ವರ್ಷಗಳಿಂದ ನೀಟ್ ಪರೀಕ್ಷೆಯಲ್ಲಿ ಅಕ್ರಮಗಳು ನಡೆಯತ್ತಲೇ ಇದ್ದರೂ ತಡೆ ಗಟ್ಟಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಪರೀಕ್ಷಾ ವ್ಯವಸ್ಥೆ ವಿಶ್ವಾಸಾರ್ಹತೆ ಕಳೆದುಕೊಳ್ಳತೊಡಗಿದೆ.

ಪ್ರಸ್ತುತ ಪರೀಕ್ಷೆ ರದ್ದು ಗೊಂಡಿರುವುದು ಪ್ರಾಮಾಣಿಕವಾಗಿ ಪರೀಕ್ಷೆ ಬರೆದು ವೈದ್ಯಕೀಯ ಪ್ರವೇಶ

ಪರೀಕ್ಷೆಯಲ್ಲಿ ಯಶಸ್ಸು ಸಾಧಿಸುತ್ತೇವೆ ಎಂಬ ಭರವಸೆ ಇಟ್ಟುಕೊಂಡಿದ್ದ ವಿದ್ಯಾರ್ಥಿ ಗಳಿಗೆ ನಿರಾಶೆಯುಂಟಾಗಿದೆ. ಪ್ರಶ್ನೆ ಪತ್ರಿಕೆ ಸೋರಿಕೆ ಮಾಡಿ ಪ್ರಾಮಾಣಿಕ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡಿದವರ ವಿರುದ್ಧ ಅತ್ಯಂತ ಕ್ರಮಗಳನ್ನು ಕೈಗೊಳ್ಳಬೇಕಿದೆ. ಕಠಿಣ

ವೈದ್ಯ ದೇಶದಾದ್ಯಂತ ಕೀಯ ಶಿಕ್ಷಣದ ಪ್ರವೇಶಕ್ಕಾಗಿ ನಡೆಯುವ ನೀಟ್ ಪರೀಕ್ಷೆಯ ಸುತ್ತ ಇತ್ತೀಚೆಗೆ ಕೇಳಿಬರುತ್ತಿರುವ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಅಕ್ರಮದ ಸುದ್ದಿಗಳು 'ಲಕ್ಷಾಂತರ ವಿದ್ಯಾರ್ಥಿಗಳ ನಿದ್ದೆ ಗೆಡಿಸಿವೆ. ಪರೀಕ್ಷೆಗೆ ಮುನ್ನವೇ ಪತ್ರಿಕೆ ಸೋರಿಕೆ ಯಾಗಿರುವುದು ವ್ಯವಸ್ಥೆಯಲ್ಲಿದ್ದ ಲೋಪಗಳನ್ನು ಎತ್ತಿ ತೋರಿಸುತ್ತದೆ. ಪ್ರಶ್ನೆಪತಿಕೆ ಸೋರಿಕೆ ಹಿಂದೆ ದೊಡ್ಡ ಜಾಲವೇ ಇದ್ದಂತಿದೆ. ಇದರ ಜೊತೆಗೆ ಪರೀಕ್ಷೆ ನಡೆಸುತ್ತಿರುವ ಸಂಸ್ಥೆಯ ಅಧಿಕಾರಿಗಳು ಹಣಕ್ಕಾಗಿ ತಮ್ಮನ್ನು ತಾವು ಮಾರಿಕೊಂಡು ಇದರಲ್ಲಿ ಶಾಮೀಲಾಗಿರುವ ಶಂಕೆ ಇದೆ. ಇದೂ ಅಲ್ಲದೆ ಕೋಚಿಂಗ್ ಸೆಂಟರ್‌ಗಳ ಮಾಫಿಯಾ ಬಗ್ಗೆಯೂ ಅನುಮಾನಗಳು ವ್ಯಕ್ತವಾಗುತ್ತಿವೆ.

ಪ್ರಕರಣ ಸಿಬಿಐಗೆ ವಹಿಸಿದ್ದು, ಈ ಪ್ರಕರಣದ ಕೂಲಂಕಷ ತನಿಖೆ ಬಗ್ಗೆ ನಡೆಯಬೇಕು. ತಪಿತಸ್ಥರ ವಿರುದ್ಧ ಕ್ರಮವಾಗುವಂತೆ ನೋಡಿಕೊಳ್ಳಬೇಕು.ಹಗರಣ ಹಿಂದೆ ಇರುವ ವರ್ಷ ಜಾಲವನ್ನು ಬೇರು ಸಹಿತ ಕಿತ್ತೆಸೆಯಬೇಕು. ಮರುಪರೀಕ್ಷೆಯನ್ನು ಅತ್ಯಂತ ಶೀಘ್ರವಾಗಿ ಮತ್ತು ಪಾರದರ್ಶಕವಾಗಿ ನಡೆಸುವ ಮೂಲಕ ವಿದ್ಯಾರ್ಥಿಗಳ ಒಂದು ವ್ಯರ್ಥವಾಗದಂತೆ ನೋಡಿಕೊಳ್ಳಬೇಕು. ಪದೇ ಪದೇ ಪ್ರಶ್ನೆ ಪತ್ರಿಕೆ ಸೋರಿಕೆ ಸೇರಿದಂತೆ ವಹಿಸಬೇಕೆಂದು ಸೈಯದ್ ನಜೀರುದ್ದೀನ್ ಖಾದ್ರಿ ತಿಳಿಸಿದ್ದಾರೆ.

## ಮೊದಲನೇ ಪುಟದಿಂದ

### ಮಂತ್ರಾಲಯ ಶ್ರೀಗಳಿಂದ ತೇರಿನ ಮನೆ ಉದ್ಘಾಟನೆ

## 6000 ಮೂರ್ತಿ ಪ್ರತಿಷ್ಠಾಪನೆ ಮಾಡಿದ ಏಕೈಕ ಸಂತ ಪಂಚಾಕ್ಷರಿ ಶಿವಾಚಾರ್ಯರಾಗಿದ್ದಾರೆ -ಮಂತ್ರಾಲಯ ಶ್ರೀ

ವಹಿಸಿ ತಮ್ಮ ಆಶೀರ್ವಚನದಲ್ಲಿ ಎಲ್ಲಾರೂ ನಾನು ಮೂರ್ತಿ ಪ್ರತಿಷ್ಠಾಪನೆ ಮಾಡಿಸಿರುವೆ ಎಂದು ಹೇಳುತ್ತಾರೆ ಆದರೆ ನಾನು ಮಾಡಿಲ ಬದಲಾಗಿ ಶ್ರೀ ಶಾಂಭವಿ ದೇವಿ ನನ್ನಿಂದ ಮಾಡಿಸಿದ್ದಾರೆ. ಭಕ್ತರ ಏಳ್ಗೆಗಾಗಿ ಆಗಮಿಸಿದ ನಾವು ಸದಾ ಅವರ ಶ್ರೇಯೋಬಿವೃದ್ದಿಗಾಗಿ, ನಾಡಿನ ಒಳತಿಗಾಗಿ ಶ್ರಮಿಸುತ್ತಿದ್ದೆವೆ ಎಂದರು. ಈ ಸಂದರ್ಭದಲ್ಲಿ ಗಬ್ಬೂರಿನ ಬೂದಿಬಸವ ಶಿವಾಚಾರ್ಯರು, ಸೋಮವಾರಪೇಟೆಯ ಅಭಿನವ ರಾಚೋಟಿವೀರ ಶಿವಾಚಾರ್ಯ , ಮಾನವಿ ಕಲ್ಮಠದ ಡಾ.ವಿರೂಪಾಕ್ಷ ಪಂಡಿತಾರಾದ್ಯರು, ಸುಲ್ತಾನಪುರದ ಶಂಭುಲಿಂಗ ಶಿವಾಚಾರ್ಯರು, ಮಂಗಳವಾರ ಪೇಟೆ ಶ್ರೀಗಳು, ಶ್ರೀ ಶಾಂತಕುಮಾರ್ ಮಠದ್ ಸೇರಿದಂತೆ ಶ್ರೀಮಠದ ಸಾವಿರಾರು ಭಕ್ತದಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿ ಗುರುಗಳ ಅನುಗ್ರಹ ಆಶೀರ್ವಾದ ಪಡೆದರು. ನೂತನ ತೇರಿನ ಮನೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಹಿರಿಯ ಮುಖಂಡ ವಾಣಿಜ್ಯೋದ್ಯಮಿ ಚುಕ್ಕಿ ಸೂಗಪ್ಪ ಸಾಹುಕಾರ, ವೈ.ಅಮರೇಶಪ್ಪ, ಯುವ ಮುಖಂಡರಾದ ರಮೇಶ ದರ್ಶನಕರ್, ಶಿವಶರಣಸಾಹುಕಾರ ಅರಕೇರಿ ಇನ್ನಿತರರು ಸನ್ಮಾನಿಸಿದರು.

## ಡಾ.ಫಾರುಕ್ ಮಣ್ಣೂರ ಶಿಘ್ರದಲ್ಲಿಯೆ ಖರ್ಗೆ ನೇತೃತ್ವದಲ್ಲಿ ಕಾಂಗ್ರೆಸ್ ಸೇರ್ಪಡೆ: ಜಗದೇವ ಗುತ್ತೇದಾರ

ನೀವು ಬಡವರ ಪರ ಕಾಳಜಿ ವುಳ್ಳವರಾಗಿದ್ದು ನಿಮ್ಮಂಥವರ ಅವಶ್ಯಕತೆ ಪಕ್ಷಕ್ಕೆ ಇದೆ ಎಂದರು.

ಜನ್ಮದಿನದ ಪ್ರಯುಕ್ತ ಸುಕನ್ಯಾ ಸಮೃದ್ಧಿ ಯೋಜನೆ ಅಡಿಯಲ್ಲಿ 200 ಹೆಣ್ಣು ಮಕ್ಕಳ 18 ವರ್ಷಗಳವರೆಗೆ ಅವರ ಕಂತನ್ನು ಪಾವತಿಸುತ್ತಿದ್ದಿರಿ, 2025 ನೆ ಸಾಲಿನಲ್ಲಿ ಉತ್ತಮವಾಗಿ ತೇರ್ಗಡೆಯಾದ 10 ವಿದ್ಯಾರ್ಥಿಗಳಿಗೆ ತಲಾ ರೂ.10000- ವಿದ್ಯಾರ್ಥಿವೇತನ ನೀಡುರಿವುದು, ಐಎಎಸ್/ಕೆಎಎಸ್ ವಿದ್ಯಾರ್ಥಿಗಳಿಗೆ ಪುಸ್ತಕಗಳ ವಿತರಣೆ ಮಾಡಿರುವುದು, ಕಲಬುರಗಿ ಜಿಲ್ಲೆಯ 15 ಜನ ವಿಧವೆಯರಿಗಾಗಿ ಬಟ್ಟೆ ಹೊಲಿಯುವ ಯತ್ರ ವಿತರಣೆ , ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 11 ಜನ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸೇರಿದಂತೆ ಅನೇಕ ಬಡವರ ಪರ ಕಾಳಜಿ ವುಳ್ಳಕಾರ್ಯಕ್ರಮ ಆಯೋಜನೆ ಮಾಡಿರುವುದು ಶ್ಲಾಘನೀಯ ಎಂದರು.

ಮಣ್ಣೂರ ಆಸ್ಪತ್ರೆಯ ಮುಖ್ಯಸ್ಥ ಡಾ. ಫಾರುಕ್ ಮಣ್ಣೂರ ಮಾತನಾಡಿ ಇಂದು ಪ್ರತಿಯೊಬ್ಬ ಪೊ?ಷಕರು ಹೇಣ್ಣು ಮಗುವಿಗೆ ಗುಣಮಟ್ಟದ ಶಿಕ್ಷಣ ನೀಡಿ ವಿದ್ಯಾವಂತರಾಗಿ ಮಾಡಿದಾರೆ ಆ ಹೇಣ್ಣು ಮಗು ಇಡಿ ಕುಟುಂಬಕ್ಕೆ ವಿದ್ಯಾವಂತರನ್ನಾಗಿ ಮಾಡುತ್ತದೆ , ಆದಕರಣ ಹೇಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರತಿಯೊಬ್ಬರು ಪೊಸ್ತಹಿಸಬೇಕು ಎಂದರು. ಮಣ್ಣುರ ಆಸ್ಪತ್ರೆ ಪ್ರಾರಂಭವಾದಗಿನಿಂದ ನಾನು ಕಲಬುರಗಿ ಜಿಲ್ಲೆಯ 750 ಕ್ಷಯ ರೋಗಿಗಳಿಗೆ ದತ್ತು ಪಡೆದು ಪೌಷ್ಠಿಕ ಆಹರ ವಿತರಣೆ ಮಾಡಲಾಗುತ್ತಿದೆ, ಕಲಬುರಗಿ ಜಿಲ್ಲಾದ್ಯಂತ ಉಚಿತವಾಗಿ ಕುಡಿಯುವ ನೀರು ಪೂರೈಸಲಾಗುತ್ತಿದೆ, ಮಧುಮೇಹ ಮುಕ್ತ ಕಲಬುರಗಿ ಉದ್ದೇಶದಿಂದ ಉಚಿತವಾಗಿ ಮಧೂಮೇಹ ತಪಾಸಣೆ ಅಭೀಯಾನ ಹಮ್ಮಿಕೋಳ್ಳಲಾಗಿದೆ , ಕಲಬುರಗಿ ಜಿಲ್ಲೆಯ ಸುಮಾರು 650 ಬಡ ಹೇಣ್ಣು ಮಕ್ಕಳಿಗೆ ಸುಕನ್ಯ ಸಮೃದ್ದಿ ಯೋಜನೆ ಅಡಿಯಲ್ಲಿ ದತ್ತು ಪಡೆದು 18 ವರ್ಷಗಳ ವರೆಗೆ ಅವರ ಹಣದ ಕಂತ್ತನ್ನು ಆಸ್ಪತ್ರೆಯಿಂದ ಪಾವತಿಸಲಾಗುತ್ತಿದೆ ಸೇರಿದಂತೆ ಅನೇಕ ಸಮಾಜಿಕ ಕಾರ್ಯ ಮಾಡಿಕೊಂಡು ಬರುತ್ತಿದ್ದೇನೆ ಎಂದು ತಿಳಿಸಿದ್ದರು.

ಈ ಸಂದರ್ಭದಲ್ಲಿ ಶ್ರೀನಿವಾಸ ಸರಡಗಿಯ ಮಹಾಲಕ್ಷ್ಮಿ ಶಕ್ತಿ ಪೀಠದ ಡಾ. ಅಪ್ಪಾರಾವ ದೇವಿ ಮುತ್ಯಾ, ಜನಾಬ ಮೌಲಾನಾ ಅಲ್ತಾಫ ಪಟೇಲ್ ಸಾಹೆಬ್ , ಶ್ರೀ ಮೌನೇಶ್ವರ ಮಠ ಗಂಜಲ ಖೇಡದ ಪೂಜ್ಯ ಶ್ರೀ ನಾಗೇಶ ಮಾಣಿಕ ಅಪ್ಪಾಜಿ, ನಿಲಕಂಠರಾವ ಮೂಲಗೆ, ಡಾ. ಎಸ್. ಬಿ.ಕಾಮರಡ್ಡಿ, ಫರಾಜುಲ್ ಇಸ್ಲಾಂ. ಮರೆಪ್ಪ ಹಳ್ಳಿ, ಡಾ.ರವಿ ಚವ್ಹಾಣ. ಶರಣಬಸಪ್ಪ ಖೇಣಿ, , ಬಾಬುಮಿಯ್ಯ ಮಣ್ಣೂರ, ಡಾ. ಮತೀನ್, ಎಮ.ಡಿ.ಇಸ್ಮಾಯಿಲ್ , ಜಹೀರ್ ಶಹಾಬಾದ, ರಾಜೇಶ ಯಾನಾಗುಂಟಿ, ಆಮೀರ ನಿಂಬಾಳಕರ್, ಹರ್ಷಾ ಪಿಂಟು, ಹರೀಶ, ನಜೀರ್ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

..

ಡಾ. ಫಾರುಕ್ ಮಣ್ಣೂರ ಅವರ ಜನ್ಮದಿನದ ಪ್ರಯುಕ್ತ ಅವರ ಅಭಿಮಾನಿ ಬಳಗದ ವತಿಯಿಂಧ ಕಲಬುರಗಿ ನಗರದಲ್ಲಿರುವ ವೃದ್ಧಾಶ್ರಮದಲ್ಲಿ ಅನ್ನ ಸಂತರ್ಪಣೆ ಕಾರ್ಯಕ್ರಮ ಹಾಗೂ ಸರ್ಕಾರಿ ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ, ಸುಕನ್ಯಾ ಸಮೃದ್ಧಿ ಯೋಜನೆ ಅಡಿಯಲ್ಲಿ 200 ಹೆಣ್ಣು ಮಕ್ಕಳ 18 ವರ್ಷಗಳವರೆಗೆ ಅವರ ಕಂತನ್ನು ಪಾವತಿಸಲು ನಿರ್ದರಿಸಿದ್ದು ಅವರ ಖಾತೆಯ ಪಾಸ್ಬುಕ್ ವಿತರಣೆ, 2026 ನೆ ಸಾಲಿನಲ್ಲಿ ಉತ್ತಮವಾಗಿ ತೇರ್ಗಡೆಯಾದ 10 ಹೆಣ್ಣು ಮಕ್ಕಳಿಗೆ ತಲಾ ರೂ.10000- ವಿದ್ಯಾರ್ಥಿವೇತನ ವಿತರಣೆ, ಐಎಎಸ್/ ಕೆಎಎಸ್ ವಿದ್ಯಾರ್ಥಿಗಳಿಗೆ ಪುಸ್ತಕಗಳ ವಿತರಣೆ, ಕಲಬುರಗಿ ಜಿಲ್ಲೆಯ 10 ಜನ ವಿಧವೆಯರಿಗಾಗಿ ಬಟ್ಟೆ ಹೊಲಿಯುವ ಉಪಕರಣ ವಿತರಣೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 11 ಜನ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸೇರಿದಂತೆ ಅನೇಕ ಸಮಾಜಿಕ ಕಾರ್ಯಕ್ರಮ ಆಯೋಜನೆ ಮಾಡಿದ್ದರು.

.

ಬೈಕ್ ರ್ಯಾಲಿ: ಡಾ. ಫಾರುಕ್ ಮಣ್ಣೂರ ಅವರ ಜನ್ಮದಿನದ ಪ್ರಯುಕ್ತ ಅವರ ಅಭಿಮಾನಿ ಬಳಗದಿಂದ ಡಾ. ಫಾರುಕ್ ಅವರ ಬಾರಾಹಿಲ್ಸ್ ನಿವಾಸಿದಂದ ಕಾರ್ಯಕ್ರಮ ನಡೆಯುವ ತ್ರಿ ನೇಂತ್ರ ಕಲ್ಯಾಣ ಮಂಟಪದವರೆಗೆ 200 ಕ್ಕೂ ಬೈಕ ಗಳ ಮೂಲಕ ಬೃಹತ ಬೈಕ ರ್ಯಾಲಿ ಮಾಡಿದ್ದರು.

### ಎನ್.ಟಿ.ಎ ರದ್ದುಗೊಳಿಸುವಂತೆ ಆಗ್ರಹಿಸಿ ಎಐಡಿಎಸ್ಓ ನೇತೃತ್ವದಲ್ಲಿ ಪ್ರತಿಭಟನೆ.

ಹದಗೆಟ್ಟ ಸ್ಥಿತಿಯನ್ನು ತೋರಿಸುತ್ತಿದೆ. ಈ ವ್ಯವಸ್ಥೆಯು ವಿದ್ಯಾರ್ಥಿಗಳಲ್ಲಿ ಘತೀವ್ರ ಆತಂಕ ಮತ್ತು ಹತಾಶೆಯನ್ನು ಮೂಡಿಸಿದೆ. ಕೇವಲ ಕೆಲವರ ಲಾಭಕ್ಕಾಗಿ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ವ್ಯವಸ್ಥಿತವಾಗಿ ನಾಶಪಡಿಸುತ್ತಿರುವುದು ಖಂಡನೀಯ" ಎಂದರು.

"ನಮ್ಮ ವಿದ್ಯಾರ್ಥಿಗಳ ಭವಿಷ್ಯದ ಅಡಿಪಾಯವನ್ನೇ ಭ್ರಷ್ಟಾಚಾರ ಮತ್ತು ಆಡಳಿತಾತ್ಮಕ ನಿರ್ಲಕ್ಷ್ಯಕ್ಕೆ ಬಲಿ ನೀಡಲಾಗುತ್ತಿದೆ. ಶಿಕ್ಷಣ ವ್ಯವಸ್ಥೆಯನ್ನು ಮಾರುಕಟ್ಟೆಯನ್ನಾಗಿ ಮಾಡಿಕೊಂಡಿರುವುವರಿಂದ ಇಂತಹ ಸಮಸ್ಯೆಗಳು ಪದೇ ಪದೇ ಹಲವು ಕೇಂದ್ರೀಕೃತ ಪರೀಕ್ಷೆಗಳಲ್ಲಿ ಮರುಕಳಿಸುತ್ತಿವೆ" ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಈಗಾಗಲೇ ನೀಟ್ ಪರೀಕ್ಷೆ ರದ್ದುಗೊಂಡಿರುವುದರಿಂದ ಗೋವಾದಲ್ಲಿ ಒಬ್ಬ ನೀಟ್ ವಿದ್ಯಾರ್ಥಿ ಆತ್ಮಹತ್ಯೆಗೆ ಶರಣಾಗಿದ್ದಾನೆ, ಹಲವಾರು ವಿದ್ಯಾರ್ಥಿಗಳು ಡಾಕ್ಟರ್ ಬಳಿ ಹೋಗಿ ಕೌನ್ಸಿಲಿಂಗ್ ಪಡೆದುಕೊಳ್ಳುತ್ತಿದ್ದಾರೆ.

ನಮ್ಮ ವಿದ್ಯಾರ್ಥಿಗಳನ್ನು ಇಂತಹ ಸ್ಥಿತಿಗೆ ಕೇಂದ್ರ ಸರ್ಕಾರ & ಹಾಗೂ ಎನ್‌ಟಿಎ ತಳ್ಳಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ಕೂಡಲೇ ಎನ್‌ಟಿಎ ಯನ್ನು ರದ್ದುಗೊಳಿಸಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಕಾರ್ಯದರ್ಶಿ ಅಜಯ್ ಕಾಮತ್ ಅವರು ಜಿಲ್ಲಾ ಅಧ್ಯಕ್ಷರಾದ ಈರಣ್ಣ, ಜಿಲ್ಲಾ ಕಾರ್ಯದರ್ಶಿ ಕಂಬಳಿ ಮಂಜುನಾಥ, ಜಿಲ್ಲಾ ಉಪಾಧ್ಯಕ್ಷರು ಎಂ ಶಾಂತಿ, ಜಿಲ್ಲಾ ಖಜಾಂಚಿ ಅನುಪಮ, ರಾಜ್ಯ ಸಮಿತಿ ಸದಸ್ಯರಾದ ಉಮಾ, ಸಮೀರ್ ಹಾಗೂ ಕಾಲೇಜು ವಿದ್ಯಾರ್ಥಿಗಳಾದ ಸುಲೋಚನಾ, ಮಂದಾರ, ಸೌಮ್ಯ, ಹಿಂದು ಭಾಯಿ, ವೈಷ್ಣವಿ, ಸೋಮಶೇಖರ್ ಇನ್ನಿತರ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಮೇ.16ರಂದು ಗ್ರಾಹಕರ ಸಂವಾದ ಸಭೆ

**ರಾಯಚೂರು ಮೇ.15:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 01ರ ಕಚೇರಿಯಲ್ಲಿ ಮೇ.16ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ 1ರವರೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 01ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವಯಂ ಘೋಷಿತ ಪ್ರಮಾಣ ಪತ್ರ ಸಲ್ಲಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸೂಚನೆ

**ರಾಯಚೂರು ಮೇ.15:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಾಹಿತಿ, ಕಲಾವಿದರ ಮಾಶಾಸನ ಹಾಗೂ ವಿಧವಾ ಮಾಶಾಸನ ಪಡೆಯುತ್ತಿರುವ ರಾಯಚೂರು ಜಿಲ್ಲೆಯ ಕಲಾವಿದರು ಪ್ರತಿ 06 ತಿಂಗಳಿಗೊಮ್ಮೆ ಆರ್ಥಿಕ ವರ್ಷದ ಮಾರ್ಚ್ ಹಾಗೂ ಸೆಪ್ಟೆಂಬರ್ ಮಾಹೆಯಲ್ಲಿ ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು (ಜೀವಿತಾವಧಿ ಪ್ರಮಾಣ ಪತ್ರ) ಈ ಕಚೇರಿಗೆ ಸಲ್ಲಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ-2: ಮೇ.16ರಂದು ಗ್ರಾಹಕರ ಸಂವಾದ ಸಭೆ

**ರಾಯಚೂರು ಮೇ.15:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ 02ರ ಕಚೇರಿಯಲ್ಲಿ ಮೇ.16ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ 1ರವರೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ 02ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಳ್ಳೆಯ ಕೆಲಸಕ್ಕೆ ಎಚ್‌ಡಿಕೆ ವಿರೋಧ: ಡಿಕೆಶಿ ತಿರುಗೇಟು



**ಬೆಂಗಳೂರು, ಮೇ 15:** "ಕುಮಾರಸ್ವಾಮಿ ಅವರು ನಮ್ಮ ಬಗ್ಗೆ ಟೀಕೆ ಮಾಡಲಿಲ್ಲ ಎಂದರೆ ರಾಜಕೀಯವಾಗಿ ಬದುಕಿರಲು ಆಗುವುದಿಲ್ಲ. ನಾವು ಒಳ್ಳೆಯ ಕೆಲಸ ಮಾಡುತ್ತೇವೆ, ಅವರು ವಿರೋಧ ಮಾಡುತ್ತಾರೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಬೆಂಗಳೂರಿನ ಸದಾಶಿವ ನಗರದ ತಮ್ಮ ನಿವಾಸದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು

ಕುಮಾರಸ್ವಾಮಿ ಅವರು ಬಿಡದಿ ಟೌನ್ ಶಿಪ್ ಯೋಜನೆಯ ಬಗ್ಗೆ ಟೀಕೆ ವ್ಯಕ್ತಪಡಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ "ಅವರು ಮಾಡಿದ ಯೋಜನೆಯನ್ನೇ ನಾವು ಮುಂದುವರೆಸುತ್ತಾ ಇರುವುದು. ನಾನು ರೈತರ ಬಳಿ ಮಾತನಾಡಲು ಸಮಯ, ದಿನಾಂಕ ನಿಗದಿ ಮಾಡಿಕೊಂಡು ಹೋಗುತ್ತೇನೆ. ರೈತರು ನನಗೆ ಎರಡೇಟು ಹೊಡೆಯಬಹುದು, ಅಷ್ಟೇ ತಾನೇ ಬಟ್ಟೆ ಹರಿಯಬಹುದು, ಕಲ್ಲೆಸೆಬಹುದು, ಧಿಕ್ಕಾರ ಹಾಕಬಹುದು. ಅದಕ್ಕೆಲ್ಲಾ ಹೆದರಿಕೊಳ್ಳಲು ಆಗುತ್ತದೆಯೇ? ಮುಂದೆ ಅವರ ಭವಿಷ್ಯ, ಮಕ್ಕಳ ಹಾಗೂ ಆಸ್ತಿಗಳ ಭವಿಷ್ಯ ಮುಖ್ಯ. ಇವತ್ತಲ್ಲ ಮುಂದಿನ 20 ವರ್ಷಗಳ ನಂತರ ಬಿಡದಿ, ಬೆಂಗಳೂರು ದಕ್ಷಿಣದ ಜನರು ನನ್ನನ್ನು ನೆನಪಿಸಿಕೊಳ್ಳುತ್ತಾರೆ" ಎಂದರು.

"ಕುಮಾರಸ್ವಾಮಿ ಅವರೇ ಈ ಯೋಜನೆಯ ಭೂಮಿಯನ್ನು ಡಿನೋಟಿಫೈ ಮಾಡಬಹುದಿತ್ತಲ್ಲವೇ? ಯಾಕೆ ಮಾಡಲಿಲ್ಲ? ನಾನು ಡಿನೋಟಿಫೈ ಮಾಡಲು ತಯಾರಿಲ್ಲ. ಅವರು ಡಿನೋಟಿಫೈ ಮಾಡಿ ಎಷ್ಟು ಅನುಭವಿಸುತ್ತಿದ್ದಾರೆ ಎಂದು ಅವರಿಗೆ ಗೊತ್ತು. ಯಡಿಯೂರಪ್ಪ ಅವರಿಗೆ, ನನಗೂ ಗೊತ್ತಿದೆ" ಎಂದು ತಿರುಗೇಟು ನೀಡಿದರು.

ಬೆಲೆ ಏರಿಕೆ ಮೋದಿ ಅವರ ಕೊಡುಗೆ

"ಬೆಲೆ ಏರಿಕೆ ಮೋದಿ ಅವರ ಕೊಡುಗೆ. ಅವರು ಬೇರೆ ರಾಷ್ಟ್ರಗಳ ಜೊತೆ ಉತ್ತಮ ಸಂಬಂಧ ಉಳಿಸಿಕೊಂಡು ಬಂದಿಲ್ಲ. ಅಂತರರಾಷ್ಟ್ರೀಯ ಬಿಕ್ಕಟ್ಟಿನ ಪರಿಸ್ಥಿತಿಯನ್ನು ಮೋದಿ ಅವರು ನಿಭಾಯಿಸುವಲ್ಲಿ ವಿಫಲರಾಗಿದ್ದಾರೆ. ಅದಕ್ಕೆ ಅವರು ವಿದ್ಯುತ್ ಉಳಿಸಿ, ಪೆಟ್ರೋಲ್ ಬಳಸಬೇಡಿ ಎಂದು ಹೇಳುತ್ತಿದ್ದಾರೆ. ಇಂಧನಗಳನ್ನು ಬಳಸದೇ ದಿನನಿತ್ಯ ಜೀವನ ಮಾಡುವುದು ಹೇಗೆ. ಅನೇಕರು ತಮ್ಮ ಬೆಂಗಾವಲು ಪಡೆ ವಾಹನಗಳನ್ನು ಕಡಿತ ಮಾಡಿದ್ದಾರೆ. ಇದು ಆಗಬಹುದು. ಆದರೆ ಜನ ಸಾಮಾನ್ಯ ಓಡಾಟ ಮಾಡದೇ ಇರಲು ಹೇಗೆ ಸಾಧ್ಯ. ಬದುಕಿಗಾಗಿ ಪ್ರಯಾಣ ಮಾಡಬೇಕಲ್ಲವೇ? ಚಿನ್ನ ಖರೀದಿ ಮಾಡಬೇಡಿ ಎಂದಿದ್ದಾರೆ ಇದು ಹೇಗೆ ಸಾಧ್ಯ. ವಿವಾಹಿತ ಮಹಿಳೆಯರಿಗೆ ಮಾಂಗಲ್ಯ ಸರ ಬೇಕು. ಹೀಗಿದ್ದಾಗ ಚಿನ್ನ ಕೊಂಡುಕೊಳ್ಳಬೇಡಿ ಎಂಬುದು ಹೇಗೆ ಸಾಧ್ಯ" ಎಂದರು.

"ದೇಶ ದೊಡ್ಡ ದುರಂತದ ಸ್ಥಿತಿಗೆ ಬಂದಿದೆ. ಅಡುಗೆ ಎಣ್ಣೆ ಬಳಸಬೇಡಿ ಎಂದರೆ ಎಲ್ಲಿ ಕಡಿಮೆ ಮಾಡೋಕೆ ಆಗುತ್ತೆ. ಇದೆಲ್ಲಾ ಮಾಡೋಕೆ ಆಗಲ್ಲ. ಜನ ಸಂಪಾದನೆ ಮಾಡುತ್ತಾರೆ ಬದುಕುತ್ತಾರೆ. ಯಾರನ್ನೂ ನಿಯಂತ್ರಣ ಮಾಡೋಕೆ ಆಗಲ್ಲ" ಎಂದರು.

ಸತೀಶನ್‌ಗೆ ಅಭಿನಂದನೆ

ಕೇರಳಕ್ಕೆ ನೂತನ ಸಿಎಂ ಆಯ್ಕೆಯಾಗಿರುವ ಬಗ್ಗೆ ಕೇಳಿದಾಗ, "ನಾನು ಅವರಿಗೆ ಶುಭಾಶಯ ಕೋರುತ್ತೇನೆ. ಪಕ್ಷದಲ್ಲಿ ಅರ್ಹತೆ ಇರುವ ಅನೇಕ ಹಿರಿಯ ನಾಯಕರು ಇದ್ದಾರೆ. ಪಕ್ಷದ ಹೈಕಮಾಂಡ್ ಸತೀಶನ್ ಅವರಿಗೆ ಅವಕಾಶ ನೀಡಿದೆ. ಅವರಿಗೆ ನಾನು ಮನಃಪೂರ್ವಕವಾಗಿ ಶುಭ ಕೋರುತ್ತೇನೆ. ಎಲ್ಲಾ ಮೈತ್ರಿ ಪಕ್ಷಗಳಿಗೆ ನಾನು ಧನ್ಯವಾದಗಳನ್ನು ತಿಳಿಸುತ್ತೇನೆ. ಜನರ ಆಶೋತ್ತರಗಳಿಗೆ ಅನುಗುಣವಾಗಿ ಕೆಲಸ ಮಾಡುತ್ತೇವೆ" ಎಂದರು.

ಎಸ್ ಐ ಆರ್ ಕರ್ನಾಟಕಕ್ಕೆ ಕಾಲಿಡುತ್ತಿರುವ ಬಗ್ಗೆ ಕೇಳಿದಾಗ, "ನಮಗೂ ಇದರ ಬಗ್ಗೆ ಅರಿವಿದೆ. ಪಕ್ಷದ ನಾಯಕರಿಗೆ ಇದರ ಬಗ್ಗೆ ತಿಳುವಳಿಕೆ ಮೂಡಿಸಲಾಗಿದೆ. ಎಲ್ಲಾ ಪಕ್ಷಗಳು ಈ ಕೆಲಸ ಮಾಡುತ್ತಿವೆ. ಬಿಜೆಪಿ, ಜನತಾದಳ ಎಲ್ಲರೂ ಅವರವರ ಮತಗಳನ್ನು ರಕ್ಷಿಸುವ ಕೆಲಸ ಮಾಡುತ್ತಿದ್ದಾರೆ.

ತಮಿಳುನಾಡು ಸಿಎಂ ವಿಜಯ್ ಅವರಿಗೆ ಶುಭಾಶಯ ತಿಳಿಸಿದ ಬಗ್ಗೆ ಕೇಳಿದಾಗ, ಹೌದು ನಿನ್ನೆ ಅವರಿಗೆ ಶುಭಕೋರಿದ್ದೇನೆ ಎಂದರು.

"ಜನಸಾಮಾನ್ಯರು ಸಂಪಾದಿಸಿದ ಆಸ್ತಿಗಳಿಗೆ ಸರಿಯಾದ ರೀತಿಯಲ್ಲಿ ದಾಖಲೆಗಳನ್ನು ಒದಗಿಸಿಕೊಡಬೇಕು ಎಂದು ನಾವು ಆರನೇ ಗ್ಯಾರಂಟಿಯಾಗಿ "ಭೂಮಿ ಗ್ಯಾರಂಟಿ"ಯನ್ನು ಜಾರಿಗೆ ತಂದಿದ್ದೇವೆ. ಜನರ ಮನೆ ಬಾಗಿಲಿಗೆ ಇ ಖಾತೆಗಳನ್ನು ತಲುಪಿಸುವ ವ್ಯವಸ್ಥೆ ಮಾಡಿದ್ದೇವೆ. ಬಿ ಯಿಂದ ಎ ಖಾತೆ ಬದಲಾವಣೆ ಮಾಡಿಕೊಡುತ್ತಿದ್ದೇವೆ" ಎಂದರು.

ನಾನೇ ಅನೇಕ ಬ್ಯಾನರ್ ಗಳನ್ನು ಹೇಳಿ ತೇಗಿಸಿದ್ದೇನೆ

"ನಾನೇ ಬ್ಯಾನರ್ ಹಾಕಬೇಡಿ ಕೇಸ್ ಹಾಕಲಾಗುವುದು ಅಂತ ಹೇಳಿದ್ದೆ. ಆದರೂ ಅಭಿಮಾನದಿಂದ ಹಾಕಿಸಿದ್ದಾರೆ. ನಾನೇ ಹಲವರಿಗೆ ಹೇಳಿ ಬ್ಯಾನರ್ ಗಳನ್ನು ತೆಗಿಸಿದ್ದೇನೆ. 50 ರಷ್ಟು ಬ್ಯಾನರ್ ಗಳು ತೆರವುಗೊಳಿಸಲಾಗಿದೆ. ಹಾಕಿರೋದು ತಪ್ಪು. ಕಾರ್ಪೊರೇಷನ್ ಅವರಿಗೂ ಕೂಡಲೇ ತೆಗೆಯಬೇಕು ಎಂದು ಸೂಚಿಸಿದ್ದೇನೆ. ಬಿಜೆಪಿ ಲೀಡರ್ ಗಳು ಸಹ ಅವರ ನಾಯಕರುಗಳು ಬರುವುದನ್ನು ಬ್ಯಾನರ್ ಹಾಕಿದ್ದಾರೆ ಅವನ್ನು ಸಹ ತೆಗೆಯಲಾಗುವುದು" ಎಂದು ಹೇಳಿದರು.

"ಎಷ್ಟೇ ಕಠಿಣ ನಿಯಮ ತಂದರೂ ಇದನ್ನು ತಡೆಯಲು ಆಗುತ್ತಿಲ್ಲ. ಇದು ಸರಿಯಲ್ಲ. ದಯವಿಟ್ಟು ಬೆಂಗಳೂರು ನಗರವನ್ನು ಸ್ವಚ್ಛವಾಗಿಡಬೇಕು. ನಗರ ವ್ಯಾಪ್ತಿ ಬಿಟ್ಟು ಹಳ್ಳಿ ಭಾಗದಲ್ಲಿ ಹಾಕಿಕೊಂಡರೆ ಬೇಡ ಎನ್ನಲ್ಲ. ಆದರೆ ನಗರ ಭಾಗದಲ್ಲಿ ಬೇಡ. ನಾನು ಹುಟ್ಟುಹಬ್ಬದ ಸಂಭ್ರಮಾಚರಣೆ ಬೇಡ ಎಂದಿದ್ದೆ. ಕಳೆದ ರಾತ್ರಿ ಅಭಿಮಾನಿಗಳು, ಕಾರ್ಯಕರ್ತರು, ನಾಯಕರು ಹಾಗೂ ಸಚಿವರು ಹುಟ್ಟುಹಬ್ಬದ ಶುಭಾಶಯಗಳನ್ನು ತಿಳಿಸಲು ಕಾಯುತ್ತಿದ್ದರು. ಅವರ ಪ್ರೀತಿ ವಿಶ್ವಾಸ, ಆಶೀರ್ವಾದ ಬೇಡ ಎನ್ನಲು ಆಗುವುದಿಲ್ಲ" ಎಂದರು.

# ಡಿಕೆಶಿಗೆ ಹುಟ್ಟುಹಬ್ಬದ ಸಂಭ್ರಮ



**ಬೆಂಗಳೂರು, ಮೇ 15:** ಜನ್ಮದಿನದ ಸಂಭ್ರಮದಲ್ಲಿರುವ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಹಲವಾರು ಗಣ್ಯರು ಹುಟ್ಟು ಹಬ್ಬದ ಶುಭಾಶಯ ಕೋರಿದ್ದಾರೆ ಇಂದು ಬೆಳಿಗ್ಗೆಯೆ ಮುಖ್ಯ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಸದಾಶಿವನಗರಕ್ಕೆ ಆಗಮಿಸಿದ ಹಲವಾರು ಗಣ್ಯರು ಕಾರ್ಯಕರ್ತರು ಹಾಗೂ ಅಭಿಮಾನಿಗಳು ತಮ್ಮ ನಾಯಕನ ಹುಟ್ಟುಹಬ್ಬಕ್ಕೆ ಶುಭ ಕೋರಿದರು ಉಪಮುಖ್ಯಮಂತ್ರಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು 64ನೇ ವಸಂತಕ್ಕೆ ಕಾಲಿಟ್ಟಿದ್ದು, ಸದಾಶಿವನಗರದ ನಿವಾಸದಲ್ಲಿ ಸಂಭ್ರಮ ಮನೆಮಾಡಿದೆ. ಮುಂಜಾನೆಯೇ ಡಿಸಿಎಂ ಮನೆ ಮುಂದೆ ಆಗಮಿಸಿದ ವೇದ ವಿದ್ವಾಂಸರು ಹಾಗೂ ಋತ್ವಿಕರು ಮನ್ಯುಸೂಕ್ತ ಮಂತ್ರಗಳ ಪಠಣದೊಂದಿಗೆ, ವೇದಘೋಷದೊಂದಿಗೆ ಡಿ ಕೆ ಶಿವಕುವಾರ್ ಅವರಿಗೆ ಆಯುಷ್ಯ ಮತ್ತು ಅಧಿಕಾರ ಪ್ರಾಪ್ತಿಯಾಗಲೆಂದು ಹರಸಿದ್ದಾರೆ.

ನೂರಾರು ಅಭಿವಾನಿಗಳು ಹಾಗೂ ಕಾರ್ಯಕರ್ತರ ಸಮ್ಮುಖದಲ್ಲಿ ಕೇಕ್ ಕತ್ತರಿಸಿದ ಅವರು, ನಂತರ ತಮಿಳುನಾಡಿನ ತಿರುಚೆ ಠದೂರ್ ನ ಮುರುಗನ್ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಲು ತಮಿಳುನಾಡಿಗೆ ತೆರಳಿದ್ದು ಸಂಜೆ ತಮಿಳುನಾಡಿನಿಂದ ವಾಪಸ್

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಅಪ್ರಾಪ್ತ ಬಾಲಕಿಯ ಸಾವಿನ ಪ್ರಕರಣ: ಆರೋಪಿತನ ಬಂಧನ, ನಿಷ್ಪಕ್ಷಪಾತ ತನಿಖೆಗೆ ಪೊಲೀಸ್ ಭರವಸೆ



**ಬೀದರ್, ಮೇ 15:** ಔರಾದ(ಬಿ) ಪಟ್ಟಣದಲ್ಲಿ ಅಪ್ರಾಪ್ತ ಬಾಲಕಿಯ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪದಡಿ ಒಬ್ಬ ಆರೋಪಿತನನ್ನು ಬಂಧಿಸಲಾಗಿದೆ ಎಂದು ಬೀದರ ಜಿಲ್ಲಾ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.
ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ದಿನಾಂಕ 08 ಮೇ 2026ರಂದು ಬಾಲಕಿಯ ತಾಯಿ ನೀಡಿದ ದೂರಿನ ಆಧಾರದಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಲಾಗಿತ್ತು. ತನಿಖೆಯ ವೇಳೆ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪಿತನನ್ನು ಪೊಲೀಸರು ದಸ್ತಗಿರಿ ಮಾಡಿದ್ದಾರೆ.
ಪ್ರಕರಣದ ಕುರಿತು ಪೊ?ಷಕರಿಂದ ಹೆಚ್ಚಿನ ಮಾಹಿತಿ ಸಂಗ್ರಹಿಸಲಾಗುತ್ತಿದ್ದು, ಅಗತ್ಯವಿರುವ ಎಲ್ಲಾ ಪುರಾವೆಗಳನ್ನು ಕಲೆಹಾಕುವ ಕಾರ್ಯ ಮುಂದುವರಿದಿದೆ. ಇಲಾಖೆಯ ಹಿರಿಯ ಅಧಿಕಾರಿಗಳ ಪರೀವೀಕ್ಷಣೆಯಲ್ಲಿ ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಯುತ್ತಿದ್ದು, ನಿಷ್ಪಕ್ಷಪಾತ ಹಾಗೂ ಸಮಗ್ರ ತನಿಖೆ ನಡೆಸಲಾಗುವುದು ಎಂದು ಪೊಲೀಸ್ ಇಲಾಖೆ ಭರವಸೆ ನೀಡಿದೆ.
ಅಪ್ರಾಪ್ತ ಬಾಲಕಿಯ ಪ್ರಕರಣವಾಗಿರುವುದರಿಂದ ಯಾವುದೇ ರೀತಿಯ ಊಹಾಪೊಹ, ವದಂತಿ ಅಥವಾ ಅಸತ್ಯ ಮಾಹಿತಿಯನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಡಬಾರದು ಎಂದು ಪೊಲೀಸರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ತನಿಖೆಗೆ ಸಹಕಾರಿಯಾಗುವ ಯಾವುದೇ ಸಾಕ್ಷ್ಯಾಧಾರಗಳು ಇದ್ದಲ್ಲಿ ನೇರವಾಗಿ ಪೊಲೀಸ್ ಇಲಾಖೆಯ ಗಮನಕ್ಕೆ ತರಬಹುದು ಎಂದು ತಿಳಿಸಿದ್ದಾರೆ.
ಸಾಮಾಜಿಕ ಜಾಲತಾಣಗಳು ಅಥವಾ ಸಾರ್ವಜನಿಕ ವೇದಿಕೆಗಳಲ್ಲಿ ವದಂತಿ ಹರಡಿ ತನಿಖೆಯ ದಿಕ್ಕು ತಪ್ಪಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ಎಚ್ಚರಿಕೆ ನೀಡಿದ್ದಾರೆ.

# ಬೀದರನಲ್ಲಿ ಅಗ್ನಿವೀರ ಸೇನಾ ಭರ್ತಿ ರ್‍ಯಾಲಿ

**ಬೀದರ, ಮೇ.15** :ಬೀದರ್‌ನಲ್ಲಿ ಜನೇವರಿ-2027 ರಲ್ಲಿ ಬಹುವರ್ಷಗಳ ನಂತರ ಅಗ್ನಿವೀರ ಸೇನಾ ಭರ್ತಿ ರ್‍ಯಾಲಿ ಜರುಗಲಿದ್ದು, ಬೀದರ ಜಿಲ್ಲೆಯ ಉದ್ಯೋಗಾಕಾಂಕ್ಷಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಇದರ ಲಾಭ ಪಡೆಯಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.
ಅವರು ಶುಕ್ರವಾರ ಬೀದರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಈ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾಡನಾಡುತ್ತಾ, ಕಲ್ಯಾಣ ಕರ್ನಾಟಕದ ಆರು ಜಿಲ್ಲೆಗಳ ಯುವಕರು ಈ ಸೇನಾ ಭರ್ತಿ ರ್‍ಯಾಲಿಯಲ್ಲಿ ಪಾಲ್ಗೊಳ್ಳಲು ಅವಕಾಶ ಇದ್ದು, ಬೀದರ ಜಿಲ್ಲೆಯ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.
ಬೀದರನ ನೆಹರು ಕ್ರೀಡಾಂಗಣದಲ್ಲಿ ಸೇನಾ ಭರ್ತಿ ರ್‍ಯಾಲಿ ಜರುಗಲಿದ್ದು, ರ್‍ಯಾಲಿ ಯಶಸ್ವಿಗೊಳ್ಳಲು ಜಿಲ್ಲಾಡಳಿತದಿಂದ ಎಲ್ಲ ರೀತಿಯ ಸಹಕಾರ ನೀಡುವುದುದಾಗಿ ತಿಳಿಸಿದರು.
ಅಗ್ನಿವೀರ ಸೇನಾ ಭರ್ತಿ ರ್‍ಯಾಲಿ ಬಗ್ಗೆ ಮಾತನಾಡಿದ ಕರ್ನಲ್ ಅಶ್ವಿನಿ ಅವರು ಬೀದರನಲ್ಲಿ 5 ವರ್ಷಗಳ ನಂತರ ರ್‍ಯಾಲಿ ಜರುಗಲಿದೆ. ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಯುವಕರು ವಿಶೇಷವಾಗಿ ಬೀದರ ಜಿಲ್ಲೆಯ ಯುವಕರು ಇದರ ಪ್ರಯೋಜನ ಪಡೆದುಕೊಳ್ಳಬೇಕೆಂದು ತಿಳಿಸಿದರು.
ಬೀದರ ಜಿಲ್ಲೆಯ ಅಭ್ಯರ್ಥಿಗಳು ತೀರ ಕಡಿಮೆ ಸಂಖ್ಯೆಯಲ್ಲಿ ಪಾಲ್ಗೊಳ್ಳುತ್ತಾರೆ, ಯುವರಲ್ಲಿ ಸೇನಾ ಭರ್ತಿ ಬಗ್ಗೆ ಹೆಚ್ಚಿನ ಅರಿವು ಪ್ರಚಾರ ಅಗತ್ಯವಿದೆ ಎಂದರು.
ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಹೆಚ್ಚುವರಿ ಪೊಲೀಸ್



ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ ಸೇರಿದಂತೆ ವಿವಿಧ ಅದಿಕಾರಿಗಲು ಉಪಸ್ಥಿತರಿದ್ದರು.

# ಬಾಲಕಿ ಹತ್ಯೆ ಕೇಸ್ ಎಸ್.ಐ.ಟಿ ತನಿಖೆಯಾಗಲಿ: ಅಂಕುಶ ಗೋಖಲೆ




**ಬೀದರ್:ಮೇ.15:** ಇತ್ತಿಚೀಗೆ ಔರಾದ್ ತಾಲೂಕಿನಲ್ಲಿ ಹತ್ಯೆಯಾದ ಅಪ್ರಾಪ್ತ ಬಾಲಕಿಯ ಪ್ರಕರಣವನ್ನು ಎಸ್.ಐ.ಟಿಗೆ ವಹಿಸುವಂತೆ ಜನರ ಧ್ವನಿ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷರಾದ ಅಂಕುಶ ಗೋಖಲೆ ಹೇಳಿದರು.
ಗುರುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಕಮಲನಗರ ತಾಲ್ಲೂಕಿನ ಬೆಳಕುಣಿ ಗ್ರಾಮದ ದಲಿತ ಸಮುದಾಯದ ಅಪ್ರಾಪ್ತೆಯ ಅತ್ಯಾಚಾರ, ಕೊಲೆ ಪ್ರಕರಣವನ್ನು ಅನ್ಯ ಜಿಲ್ಲೆಯ ದಕ್ಷ ಆಡಳಿತಗಾರರನ್ನು ತನಿಖೆಗೆ ನಿಯೋಜಿಸಬೇಕು. ತನಿಖೆ ಪೂರ್ಣಗೊಳ್ಳುವವರೆಗೆ ಎಸ್‌ಪಿ ಪ್ರದೀಪ್ ಗುಂಟಿ ಅವರನ್ನು ಜಿಲ್ಲೆಯಿಂದ ವರ್ಗಾವಣೆಗೊಳಿಸಬೇಕು. ಪುನಃ ಶವದ ಮರಣೋತ್ತರ ಪರೀಕ್ಷೆ ನಡೆಸಬೇಕು. ಎಂದು ಹೇಳಿದರು.
ಘಟನೆಯ ಬಳಿಕ ಪೊಲೀಸರು ಎಫ್‌ಐರ್‌ನಲ್ಲಿ ಆತ್ಮಹತ್ಯೆ ಎಂದು ಮಾಡಿದ್ದಾರೆ. ಸಂಘಟನೆಗಳು ಮನವಿ ಕೊಟ್ಟ ನಂತರ ಆತ್ಮಹತ್ಯೆಗೆ ಪ್ರಚೋದನೆ ಎಂಬುದಾಗಿ ಮಾಡಿದ್ದಾರೆ. ಸ್ವಜಾತಿಯವನು ಎಂಬ ಕಾರಣಕ್ಕಾಗಿ ಔರಾದ್ ಕ್ಷೇತ್ರದ ಶಾಸಕ ಪ್ರಭು ಚವಾಣ್ ಆರೋಪಿ ರಕ್ಷಣೆಗೆ ನಿಂತಿದ್ದಾರೆ. ಕುಸ್ತಿ ತರಬೇತಿ ಹಾಗೂ ಸಾಲ ವಸೂಲಾತಿ ಹೆಸರಿನಲ್ಲಿ ಲಖನ್ ಎಂಬಾತ ಬಾಲಕಿಯನ್ನು ಅಪಹರಿಸಿ, ಲೈಂಗಿಕ ದೌರ್ಜನ್ಯ ನಡೆಸಿ, ಕಿರುಕುಳ ಕೊಟ್ಟು ಕೊಲೆ ಮಾಡಿದ್ದಾನೆ. ಈ ಘಟನೆಯನ್ನು ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಗಂಭೀರವಾಗಿ ತೆಗೆದುಕೊಳ್ಳಬೇಕು. ಎಂದು ಒತ್ತಾಯಿಸಿದರು.
ರಾಜೆ ಸಂಧಾನದ ಮೂಲಕ ಕೊನೆಗೊಳಿಸಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಪ್ರಯತ್ನಿಸುತ್ತಿದ್ದಾರೆ. ಆದರೆ, ಇದು ಸರಿಯಾದ ಕ್ರಮವಲ್ಲ. ಕೊಲೆ ಆರೋಪಿ ಲಖನ್ ಪವಾನ ತಂದೆ ಬಾಬುರಾವ್ ಪವಾರ್ ಹಾಗೂ ಬಾಲಕಿಯ ಪೊಷಕರನ್ನು ಎಸ್‌ಪಿಯವರು ತಮ್ಮ ಕಚೇರಿಗೆ ಕರೆಸಿಕೊಂಡು, ರಾಜಿ ಮಾಡಿಸಲು ಪ್ರಯತ್ನಿಸಿದ್ದಾರೆ. ಈ ಕುರಿತು ಕೆಲ ಸಂಘಟನೆಗಳ ಮುಖಂಡರು ಪ್ರಶ್ನಿಸಿದರೆ, ಅಂಥವರಿಗೆ ಪೊಲೀಸರು ನೋಟಿಸ್ ಕೊಟ್ಟಿದ್ದಾರೆ. ಕೊಲೆ ಆರೋಪಿಯನ್ನು ಜತೆಗಿಟ್ಟುಕೊಂಡು ರಾಜಿ ಸಂಧಾನ ಮಾಡುವುದು ಸರಿಯೇ? ಇದರ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರೇ ಉತ್ತರಿಸಬೇಕು ಎಂದು ಗೋಖಲೆ ಆಗ್ರಹಿಸಿದರು.
ಮುಖಂಡ ದಿಲೀಫ್‌ಕುಮಾರ್ ವರ್ಮಾ ಮಾತನಾಡಿ, ಆರೋಪಿಯ ಎನ್‌ಕೌಂಟರ್ ಮಾಡಬೇಕು. ನೊಂದ ಕುಟುಂಬಕ್ಕೆ ನ್ಯಾಯ ಒದಗಿಸಬೇಕು. ಲಖನ್ ಬಾಬುರಾವ್ ಪವಾರ್ ವಿರುದ್ಧ ಲೈಂಗಿಕ ದೌರ್ಜನ್ಯದ ಜೊತೆಗೆ ಕೊಲೆ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.
ಬಹುಜನ ಸಮಾಜ ಪಕ್ಷದ ಜಿಲ್ಲಾಧ್ಯಕ್ಷ ಕಪಿಲ ಗೋಡಬೊಲೆ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ನಂತರ ಎಸ್‌ಸಿ/ಎಸ್‌ಟಿ, ಒಬಿಸಿ, ಮೈನಾರಿಟಿ ಮೇಲೆ ನಿರಂತರವಾಗಿ ಅಟ್ರಾಸಿಟಿ ಪ್ರಕರಣಗಳು ನಡೆಯುತ್ತಿವೆ. ಜಿಲ್ಲೆಯ ಭಾಲ್ಕಿಯಲ್ಲೂ ಅನೇಕ ಪ್ರಕರಣಗಳು ನಡೆದಿವೆ. ಈಗ ಕಮಲನಗರದಲ್ಲಿ ಮತ್ತೊಂದು ದೌರ್ಜನ್ಯ, ಕೊಲೆ ಪ್ರಕರಣ ನಡೆದಿದೆ. ನ್ಯಾಯ ಕೊಡಿಸಲು ಆಗದಿದ್ದರೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು.
ಕಮಲನಗರದ ಬೆಳಕುಣಿ ಘಟನೆಯ ಕುರಿತು ರಾಜೀವ್ ಶಿಂಧೆ ಎಂಬುವರು ಫೇಸ್‌ಬುಕ್‌ನಲ್ಲಿ ಬರೆದಿರುವುದಕ್ಕೆ ಪೊಲೀಸರು ಅವರನ್ನು ಕರೆಸಿ, ವಿಚಾರಣೆಗೆ ಒಳಪಡಿಸಿದ್ದಾರೆ. ಇಂಥದ್ದೇ ಪ್ರಕರಣದಲ್ಲಿ ರಾಹುಲ್ ಖಂದಾರೆ ಅವರನ್ನು ಬಂಧಿಸಿದ್ದಾರೆ. ಇದು ಸರಿಯಾದ ಕ್ರಮವಲ್ಲ ಎಂದರು.
ಜನರ ಧ್ವನಿ ಸಂಘಟನೆಯ ಜಿಲ್ಲಾಧ್ಯಕ್ಷ ರಾಜಕುಮಾರ ಶಿಂಧೆ, ಮುಖಂಡರಾದ ಹಣಮಂತ ಮೊಟ್ಟೆ, ತಿಪ್ಪಣ್ಣ ವಾಲಿ, ಅಂಬಾದಾಸ ಚಕ್ರವರ್ತಿ, ಸಚೀನ ಗಿರಿ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಜೇವರಗಿಯಲ್ಲಿ ಇಂದಿನಿಂದ ಅಂಬೇಡ್ಕರ್ ಅರಿವು ಉತ್ಸವ



**ಜೇವರಗಿ,ಮೇ 15:** ಡಾ.ಅಂಬೇಡ್ಕರ್ ಜಯಂತಿಯ ಅಂಗವಾಗಿ ಪಟ್ಟಣದ ಅಂಬೇಡ್ಕರ್ ಭವನದ ಬಳಿ ಮೇ 15ರಿಂದ 17ರವರೆಗೆ ಡಾ.ಅಂಬೇಡ್ಕರ್ ಅರಿವು ಉತ್ಸವ-2026 ಹಮ್ಮಿಕೊಳ್ಳಲಾಗಿದೆ ಎಂದು ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ಪುಂಡಲೀಕ ಗಾಯಕವಾಡ ತಿಳಿಸಿದ್ದಾರೆ.
ಪಟ್ಟಣದ ಅಂಬೇಡ್ಕರ್ ಭವನದ ಬಳಿ ವೇದಿಕೆ ಪೂರ್ವಸಿದ್ಧತೆ ನಡೆಸಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, 16ರಂದು ನಡೆಯುವ ಕಾರ್ಯಕ್ರಮದ ಸಾನ್ನಿಧ್ಯವನ್ನು ಸೊನ್ನದ ಶಿವಾನಂದ ಸ್ವಾಮೀಜಿ, ಯಡ್ರಾಮಿ ಸಿದ್ದಲಿಂಗ ಸ್ವಾಮೀಜಿ, ಚಿಗರಳ್ಳಿ ಸಿದ್ದಬಸವ ಕಬೀರಾನಂದ ಸ್ವಾಮೀಜಿ ವಹಿಸುವರು. ಸರ್ಕಾರಿ ಪದವಿ ಕಾಲೇಜಿನ ಶಾಂತಾ ಅಷ್ಟಗಿ, ಚಂದ್ರಶೇಖರ ಕಟ್ಟಿಮನಿ ಮುಖ್ಯ ಭಾಷಣ ಮಾಡಲಿದ್ದಾರೆ ಎಂದು ಹೇಳಿದರು. 17ರಂದು ಬೆಳಿಗ್ಗೆ 11 ಗಂಟೆಗೆ ನಡೆಯಲಿರುವ ಮೆರವಣಿಗೆಗೆ ಪಿಎಸ್‌ಐ ಗಜಾನಂದ ಬಿರಾದಾರ ಚಾಲನೆ ನೀಡುವರು. ಸಂಜೆ ನಡೆಯಲಿರುವ ಕಾರ್ಯಕ್ರಮವನ್ನು ಸಚಿವ ಡಾ.ಎಚ್. ಸಿ.ಮಹಾದೇವಪ್ಪ ಉದ್ಘಾಟಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕಖರ್ಗೆ ಜ್ಯೋತಿ ಬೆಳಗಿಸುವರು. ರಾಜರತ್ನ ಅಂಬೇಡ್ಕರ್ ಮುಖ್ಯ ಭಾಷಣ ಮಾಡಲಿದ್ದಾರೆ. ಜ್ಞಾನ ಪ್ರಕಾಶ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಕೆಕೆಆರ್‌ಡಿಬಿ ಅಧ್ಯಕ್ಷ ಡಾ.ಅಜಯಸಿಂಗ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿವರಿಸಿದರು.
ಸಮಿತಿ ಗೌರವಾಧ್ಯಕ್ಷ ಶಾಂತಪ್ಪ ಯಲಗೋಡ, ಸುಭಾಷ ಚನ್ನೂರ, ಭೀಮರಾಯ ನಗನೂರ, ಮಲ್ಲಣ್ಣ ಕೊಡಚಿ, ರಾಯಪ್ಪ ಬಾರಿಗಿಡ, ಬೆಣ್ಣೆಪ್ಪ ಕೊಂಬಿನ್, ರಾಜಶೇಖರ ಶಿಲ್ಪಿ, ಶ್ರೀಹರಿ ಕರಕಿಹಳ್ಳಿ, ಸಿದ್ರಾಮ ಕಟ್ಟಿ, ಪ್ರಭಾಕರ ಸಾಗರ, ಸಂಗಣ್ಣ ಕಟ್ಟಿಸಂಗಾವಿ ಸೇರಿದಂತೆ ಹಲವಾರು ಜನ ಇದ್ದರು.

# ಜಗತ್ತಿಗೆ ಸಾಂಸ್ಕೃತಿಕ ಬೆಳಕು ನೀಡಿದ ಭಾರತ: ಶಂಭುಲಿಂಗ ಶಿವಾಚಾರ್ಯರು

**ಕಮಲನಗರ :ಮೇ.15:**ಜಗತಿನ ಮೇಲೆ ಯುದ್ಧದ ಕಾರ್ಮೋಡ ಕವಿದಿದೆ ಭಾರತ ಒಂದು ಜಗತ್ತಿಗೆ ಮಾರ್ಗದರ್ಶಕವಾಗಿ ಪರಿಣಮಿಸುತಿದೆ ಎಂದು ಡೋಣಗಾಂವ (ಎಂ) ಉದಗೀರ ಹಾವಗಿಸ್ವಾಮಿ ಮಠದ ಪೀಠಾಧಿಪತಿಗಳಾದ ಡಾ ಶಂಭುಲಿಂಗ ಶಿವಾಚಾರ್ಯರು ಅಭಿಮತ ವ್ಯಕ್ತಪಡಿಸಿದರು.

ತಾಲೂಕಿನ ಡೋಣಗಾಂವ (ಎಂ) ಗ್ರಾಮದಲ್ಲಿ ನಡೆದ ಸಾಕ್ಷಿ ಹನುಮಾನ ಮಂದಿರದ ಕಳಸಾರೋಹಣ ಕಾರ್ಯಕ್ರಮದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಧಾರ್ಮಿಕರು ಶರಣರು ಸಮಾಜದ ಸುಧಾಕರು ನೀಡಿರುವ ಕೊಡುಗೆ ಅಪಾರವಾಗಿ ಅವರು ನೀಡಿರುವ ಧರ್ಮದ ಪರಂಪರೆಯನ್ನು ಉಳಿಸಿ ಬೆಳೆಸುವುದು ಸಂಕಲ್ಪ ವಾಗಬೇಕು ಎಂದು ಅವರು ತಿಳಿಸಿದರು.
ಬಳಿಕ ಕಾರ್ಯಕ್ರಮದ ಘನ ನೇತೃತ್ವ ವಹಿಸಿರುವ ಪೂಜ್ಯ ಡಾ. ಶಾಂತವೀರ ಶ್ರೀಗಳು ಮಾತನಾಡಿ ಮನುಷ್ಯ ಪ್ರೀತಿಯಿಂದ ಬದುಕಲು ಕಲಿಯೋದು ಮುಖ್ಯ ದೇವರು ಮನುಷ್ಯನ ಆತ್ಮದಲ್ಲಿ ಅಡಗಿದ್ದಾನೆ, ಜೀವನದಲ್ಲಿ ತಾವುಗಳು ಒಳ್ಳೆ ಕೆಲಸಗಳನ್ನು ಮಾಡಬೇಕು ಎಂದು ನುಡಿದರು.
ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿರುವ
ಸಾಯೀಗಾಂವ ಶ್ರೀ ಮಾತನಾಡಿ "ದೇವನೊಬ್ಬ ನಾಮ ಹಲವು
ಎಂಬುವ ಹಾಗೆ ಒತ್ತಡದ ಜೀವನದಲ್ಲಿ ದೇವರ ನಾಮಸ್ಮರಣೆ ಮುಖ್ಯ ಎಂದರು.
ಗ್ರಾಮದ ಸುತ್ತಮುತ್ತಲಿನ ಸಾವಿರಾರು ಹೆಣ್ಣು ಮಕ್ಕಳು ತಲೆಯ ಮೇಲೆ ಕಳಸ ಹೊತ್ತಿಕೊಂಡು ವಿವಿಧ ಬಡಾವಣೆಯ ಮೂಲಕ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಗ್ರಾಮದ ನವಯುವಕರು ಹೆಜ್ಜೆ ಹಾಕಿ ಕುಣಿದು ಕುಪ್ಪಳಿಸಿದರು. ಭಕ್ತಿ ಭಾವದಿಂದ ಮೇರೆದರು. ವಿವಿಧ ಗ್ರಾಮಗಳಿಂದ ಆಗಮಿಸಿರುವ ಊರಿನ ಹೆಣ್ಣು ಮಕ್ಕಳಿಗೆ ಕಾಣಿಕೆ ನೀಡಲಾಯಿತು. ಕಾರ್ಯಕ್ರಮಕ್ಕೆ ಬಂದಿರುವಂತಹ ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನು



ಮಾಡಿಸಿದ್ದರು.ಕಾರ್ಯಕ್ರಮಕ್ಕೆ ಮೊದಲು ವಿಶೇಷ ಪೂಜೆ ಸಲ್ಲಿಸಿದರು ಶ್ರೀ ಶಂಭುಲಿಂಗ ಶಿವಾಚಾರ್ಯರು ಹಸ್ತದಿಂದ ಕಳಸಾರವನ್ನು ನೆರವೇರಿತು.
ಈ ಕಾರ್ಯಕ್ರಮವು ಮಠದ ಉಮಾಕಾಂತ ದೇಶಿಕೇಂದ್ರಸ್ವಾಮಿಜಿ ಉಪಸ್ಥಿತಿಯಲ್ಲಿ ಭವ್ಯವಾಗಿ ಮತ್ತು ದಿವ್ಯವಾದ ಕಾರ್ಯಕ್ರಮವನ್ನು ನೆರವೇರಿತು.

ಈ ಸಂಧರ್ಭದಲ್ಲಿ ಸೈಲೇಶ್ ದೇಶಮುಖ, ವಿಜಕುಮಾರ್ ದೇಶಮುಖ, ಬಾಲಾಜಿ ದೇಶಮುಖ್, ಅಪ್ಪಸಾಬ್ ದೇಶಮುಖ, ರವಿ ಚಿಂಚನ್ಸೂರೆ, ಗಣೇಶ್ ಕಾರೆಗವೆ, ಒಂದೇವಿ ಟೀಚರ್, ಮಲ್ಲಿಕಾರ್ಜುನ ಹೊಂಡಾಳೆ, ಸಿದ್ದು ಹೂಗಾರ್, ದಿಲೀಪ್ ವಲೂರೆ, ಮಾಣಿಕರಾವ ಹೊಂಡಾಳೆ,ಹಾವಗಿ ಬಳ್ತೆ, ವೈಜೀನಾಥ ಹೊಂಡಾಳೆ, ಬಬನ ಪಾಟೀಲ್ ಗ್ರಾಮದ ಭಕ್ತರು ಹಾಗೂ ಗ್ರಾಮಸ್ಥರು ಭಜನೆ ಮಂಡಳಿಯವರು ಉಪಸ್ಥಿತರಿದ್ದರು.ಹಾವಗಿ ಮಠಪತಿ, ಪ್ರವೀಣ್ ಹೊಂಡಾಳೆ ನಿರೂಪಿಸಿದರು.

# ಅಕ್ರಮವಾಗಿ ಸಾಗಿಸುತ್ತಿದ್ದ ಅಪರೂಪದ ಹಾವು ವಶಕ್ಕೆ



**ಬೀದರ್,ಮೇ.15**–ಖಚಿತ ಮಾಹಿತಿ ಮೇರೆಗೆ ಅರಣ್ಯ ಇಲಾಖೆ ಅಧಿಕಾರಿಗಳು ಬರ್ಜರಿ ಕಾರ್ಯಾಚರಣೆ ನಡೆಸಿ ಲಕ್ಷಾಂತರ ರೂಪಾಯಿ ಮೌಲ್ಯದ ಅಪರೂಪದ ಹಾವನ್ನ ಅಕ್ರಮವಾಗಿ ಸಾಗಿಸುತ್ತಿದ್ದವರನ್ನು ಬಂಧಿಸಿದ್ದಾರೆ.
ಆಂಧ್ರ ಪ್ರದೇಶ ನೋಂದಣಿ ಹೊಂದಿದ್ದ ಬಿಳಿ ಬಣ್ಣದ ಕಾರಿನಲ್ಲಿ ರೆಡ್ ಸ್ಯಾಂಡ್ ಬೋವಾ ಜೀವಂತ ಹಾವನ್ನ ಅಕ್ರಮವಾಗಿ ಸಾಗಿಸಲಾಗುತ್ತಿತ್ತು. ದಾಳಿ ವೇಳೆ ಸುಮಾರು 5.34 ಕೆ.ಜಿ ತೂಕದ ಜೀವಂತ ಸ್ಯಾಂಡ್ ಬೋವಾ ಹಾವನ್ನ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನ ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ.ಅರಣ್ಯ ಇಲಾಖೆ ಅಧಿಕಾರಿಗಳ ಕಾರ್ಯಾಚರಣೆಯಲ್ಲಿ ಹಾವು ಸಾಗಿಸುತ್ತಿದ್ದ ಕಾರನ್ನೂ ವಶಪಡಿಸಿಕೊಳ್ಳಲಾಗಿದೆ. ಈ ಕುರಿತು ವನ್ಯಜೀವಿ ಸಂರಕ್ಷಣಾ ಕಾಯ್ದೆ-1972ರಡಿ ಪ್ರಕರಣ ದಾಖಲಾಗಿದೆ. ಬೀದರ್ ಜಿಲ್ಲಾ ಅರಣ್ಯಾಧಿಕಾರಿ ಆಶಿಶ್ ರೆಡ್ಡಿ ಮಾರ್ಗದರ್ಶನದಲ್ಲಿ ಅಧಿಕಾರಿಗಳು ದಾಳಿ ನಡೆಸಿದರು.

# ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಎಲ್ಲ ಅಧಿಕಾರಿಗಳುಜಾಗೃತರಾಗಿ ಕಾರ್ಯನಿರ್ವಹಿಸಿ:ಸಚಿವ ಈಶ್ವರ ಬಿ.ಖಂಡ್ರೆ



**ಬೀದರ, ಮೇ.15:** ಜಿಲ್ಲೆಯ 38 ಗ್ರಾಮ ಪಂಚಾಯತಿಯ 68 ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು 19 ಕಡೆಗಳಲ್ಲಿ ಟ್ಯಾಂಕರನಿಂದ ಹಾಗೂ 59 ಕಡೆಗಳಲ್ಲಿ ಬಾಡಿಗೆ ಬೋರವೆಲ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಇಂದಿಲ್ಲಿ ತಿಳಿಸಿದರು.

ಅವರು ಗುರುವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಕುಡಿಯುವ ನೀರಿನ ಪರಿಶೀಲನಾ ಸಭೆಯ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಮುಂಗಾರು ಹಂಗಾಮು ಆರಂಭಗೊಳ್ಳುವ ತನಕ ಜೂನ್.15 ರವರೆಗೆ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳು ಜಾಗೃತರಾಗಿ ಕಾರ್ಯನಿರ್ವಹಿಸಬೇಕೆಂದು ತಿಳಿಸಿದರು.

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಜಿಲ್ಲೆಗೆ 4 ಕೋಟಿ ರು ಬಿಡುಗಡೆಯಾಗಿದೆ. ಔರಾದ್ ತಾಲೂಕಿನ 22 ಗ್ರಾಮಗಳಲ್ಲಿ ಹಾಗೂ ಭಾಲ್ಕಿ ತಾಲೂಕಿನ 18 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಹೆಚ್ಚಾಗಿದೆ ಎಂದು ತಿಳಿದು ಬಂದಿದೆ. ಜಿಲ್ಲೆಯ ಯಾವುದೇ ನಗರ ಪ್ರದೇಶದಲ್ಲಿ ನೀರಿನ ಸಮಸ್ಯೆ ಇಲ್ಲ ಎಂದರು.

ಕಾರಂಜಾ ಜಲಾಶಯದಲ್ಲಿ ಸಧ್ಯ 5 ಟಿಎಂಸಿ ನೀರು ಸಂಗ್ರಹ ಇದೆ ಹೀಗಾಗಿ ನಗರ ಪ್ರದೇಶದಲ್ಲಿ ಕುಡಿಯುವ ನೀರಿಗೆ ಯಾವುದೇ ಸಮಸ್ಯೆ ಬರದಂತೆ ಮಹಾನಗರ ಪಾಲಿಕೆ ಆಯುಕ್ತರು ಹಾಗೂ ಮುಖ್ಯಾಧಿಕಾರಿಗಳಿಗೆ ಸೂಚಿಸಲಾಗಿದೆ. ಮುಂದಿನ 20 ದಿನಗಳಲ್ಲಿ ಅಥವಾ ಜೂನ 7ರ ವರೆಗೆ ಮುಂಗಾರು ಮಳೆ ಬರುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹೀಗಾಗಿ ಅಧಿಕಾರಿಗಳು ಜೂನ್ 15ರ ವರೆಗೆ ಕುಡಿಯುವ ನೀರಿನ ಕುರಿತು ಯಾವುದೇ ಸಮಸ್ಯೆ ಆಗದಂತೆ ಎಲ್ಲರು ಜಾಗೃತರಾಗಿರಬೇಕು ಎಂದರು.

135 ಕೋಟಿ ಬೆಳೆ ಹಾನಿ ಪರಿಹಾರ: ಕಳೆದ ಹಂಗಾಮಿನಲ್ಲಿ ಅತಿವೃಷ್ಟಿ ಆಲಿಕಲ್ಲು ಮಳೆಯಿಂದ ರೈತರ ಬೆಳೆ ಹಾನಿಯಾಗಿದ್ದು ಅದಕ್ಕೆ ರಾಜ್ಯ ಸರ್ಕಾರದಿಂದ 100 ಕೋಟಿ ರು. ಈಗಾಗಲೇ ರೈತರ ಖಾತೆಗೆ ಜಮೆಯಾಗಿದೆ. ಸರ್ಕಾರದಿಂದ ಹೆಚ್ಚಿನ ಪರಿಹಾರಕ್ಕೆ ಮನವಿ ಮಾಡಿದ್ದರಿಂದ ಹೆಚ್ಚುವರಿ ಅನುದಾನ ಕೂಡ ಸರ್ಕಾರ ಮಂಜೂರು ಮಾಡಿದೆ. ಇನ್ನು 142 ಕೋಟಿ ಹೆಚ್ಚಿನ ಅನುದಾನ ಬರಬೇಕಾಗಿದೆ ಮುಂದಿನ 15–20 ದಿನಗಳಲ್ಲಿ ರೈತರ ಖಾತೆಗೆ ಜಮೆಯಾಗಬಹುದು ಎಂದು ಸಚಿವರು ತಿಳಿಸಿದರು.

ಈ ವರ್ಷ 250 ಕೋಟಿ ಬೆಳೆ ವಿಮೆ: ಫಸಲ ಬಿಮಾ ಯೋಜನೆ ಆರಂಭದ ಪ್ರಥಮ ವರ್ಷದಲ್ಲಿ ಹೆಚ್ಚಿನ ಪರಿಹಾರ ಬಂದಿತ್ತು ನಂತರದ ವರ್ಷಗಳಲ್ಲಿ ಕಟ್ಟಿದಷ್ಟು ಬೆಳೆ ವಿಮೆ ಬಂದಿಲ್ಲ. ಬೆಲೆ ನಷ್ಟ ಆದರೂ ರೈತರಿಗೆ ಹಣ ಸಿಗುತ್ತಿರಲಿಲ್ಲ ಈ ವರ್ಷ 250 ಕೋಟಿ ರು. ಬೆಳೆ ವಿಮೆ ಹಣ ಬಂದಿದೆ. ಇ,ಟಾದರೂ ಅಧಿಕಾರಿಗಳ ಸಹಕಾರದಿಂದ ರೈತರಿಗೆ ಹೆಚ್ಚಿನ ಬೆಳೆ ಪರಿಹಾರವಾಗಿ 520 ಕೋಟಿ ರು ವರೆಗೆ ಪರಿಹಾರ ಬಂದಿದೆ ಹೀಗಾಗಿ ಎಲ್ಲಾ ಅಧಿಕಾರಿಗಳಿಗೆ ಧನ್ಯವಾದ ತಿಳಿಸಿದರು.

ಶಾಶ್ವತ ಕುಡಿಯುವ ನೀರಿಗಾಗಿ 7 ಸಾವಿರ ಕೋಟಿ ಯೋಜನೆ: ಬೀದರ್ ಹಾಗೂ ಕಲಬುರಗಿ ಜಿಲ್ಲೆಯ ಕೆಲ ಹಳ್ಳಿಗಳಿಗೆ ಶಾಶ್ವತ ಕುಡಿಯುವ ನೀರಿನ ಯೋಜನೆಗಾಗಿ ನಾರಾಯಣಪೂರ ಜಲಾಶಯದಿಂದ ನೀರು ಸರಬರಾಜು ಮಾಡಲು 7 ಸಾವಿರ ಕೋಟಿ ರು. ಯೋಜನೆ ಸಿದ್ದಪಡಿಸಲಾಗುತಿದ್ದು ಇದರಿಂದ ಮುಂದಿನ 25 ವರ್ಷಗಳ ವರೆಗೆ ಕುಡಿಯುವ ನೀರಿನ ಸಮಸ್ಯೆಯೆ ಉದ್ಭವಿಸುವುದಿಲ್ಲ. ಬೀದರ್ ಜಿಲ್ಲೆಯ 120 ಹಳ್ಳಿಗಳು ಹಾಗೂ ಕಲಬುರಗಿಯ 250 ಹಳ್ಳಿಗಳಿಗೆ ಈ ಯೋಜನೆಯ ಲಾಭ ಸಿಗಲಿದೆ. ಸರ್ಕಾರದ ಮಟ್ಟದಲ್ಲಿ ಇದಕ್ಕೆ ಅನುಮೋದನೆ ಸಿಕ್ಕರೆ ಯೋಜನೆಯ ಕಾಮಗಾರಿ ಆರಂಭಿಸಲಾಗುವುದು ಎಂದು ಸಚಿವರು ತಿಳಿಸಿದರು.

ಈಗಾಗಲೇ ಭಾಲ್ಕಿ ತಾಲೂಕಿನ 120 ಹಳ್ಳಿಗಳಿಗೆ ಶಾಶ್ವತ ನೀರು ಮಲ್ಟಿ ವಿಲೇಜ್ ಯೋಜನೆ ಕಾಮಗಾರಿ ನಡೆಯುತ್ತಿದ್ದು ಇದರಿಂದ 110 ರಿಂದ 120 ಹಳ್ಳಿಗಳಿಗೆ ನೀರಿನ ವ್ಯವಸ್ಥೆ ಕಲ್ಪಿಸಲಿದೆ.

ಜಿಲ್ಲೆಯಲ್ಲಿ ಜೆಜೆಎಮ್ ವತಿಯಿಂದ ಕುಡಿಯುವ ನೀರಿನ ಕೆಲಸ ನಡೆಯುತ್ತಿದೆ. ಕೆಲವು ಕಡೆಗಳಲ್ಲಿ ಪೈಪ್ ಲೈನ್ ಕಿತ್ತು ಹೋಗಿದೆ. ತಪಾಸಣೆ ಮಾಡಿ ತನಿಖೆ ಕೈಗೊಳ್ಳುತ್ತೇವೆ ಎಂದ ಅವರು ಕೇಂದ್ರ ಸರ್ಕಾರ ಜಲ ಜೀವನ ಮಿಷನ್ ಯೋಜನೆಗಾಗಿ ಇನ್ನು 20 ಸಾವಿರ ಕೋಟಿ ರು ಬರಬೇಕಾಗಿದೆ ಎಂದರು.

ರೈತರ ಪ್ರತಿ ಟನ್ ಕಬ್ಬಿಗೆ 2900 ರೂ. ಕೊಡಬೇಕು: ರಾಜ್ಯ ಸರ್ಕಾರ ಘೋಷಿಸಿದಂತೆ ರೈತರ ಪ್ರತಿ ಟನ್ ಕಬ್ಬಿಗೆ 50 ರು. ಹಣ ರೈತರ ಖಾತೆಗೆ ಜಮೆ ಮಾಡಿದೆ. ಹೀಗಾಗಿ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ರೈತರ ಕಬ್ಬಿನ ಬಾಕಿ ಬಿಲ್ ಕೊಡಬೇಕು. ರೈತರ ಕಬ್ಬಿ ಬಿಲ್ ಬಾಕಿ ಇಟ್ಟುಕೊಂಡ ಕಾರ್ಖಾನಗಳ ಮೇಲೆ ಕ್ರಮ ಕೈಗೊಳ್ಳಲಾಗುವುದು ತಿಳಿಸಿದರು.

15–20 ದಿನದಲ್ಲಿ ವಿಮಾನಯಾನ ಸೇವೆ ಆರಂಭ: ಈಗಾಗಲೇ ಸರ್ಕಾರ ಮಟ್ಟದಲ್ಲಿ ವಿಮಾನಯಾನ ಸೇವೆಗಾಗಿ ಅನುಮೋದನೆ ನೀಡಿದ್ದು ಇನ್ನೊಮ್ಮೆ ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಿ ಯಾವ ದಿನಾಂಕದಿಂದ ಬೂಕಿಂಗ್ ಆರಂಭಿಸಲಾಗುವುದು ಬುದ ಬಗ್ಗೆ ಮಾಹಿತಿ ನೀಡುತ್ತಾರೆ ಹೀಗಾಗಿ 15 ರಿಂದ 20 ದಿನದೊಳಗಾಗಿ ವಿಮಾನಯಾನ ಸೇವೆ ಆರಂಭವಾಗಲಿದೆ ಎಂದರು. ಮುಂದಿನ ದಿನಗಳಲ್ಲಿ ವಿಮಾನಯಾನ ಸೇವೆಯ ಅಗ್ರಿಮೆಂಟ್ 3 ವರ್ಷದ ಅವಧಿಯವರೆಗೆ ಮಾಡಿಕೊಳ್ಳುವ ಪ್ರಯತ್ನ ಮಾಡಲಾಗುವುದು ದು ಸಚಿವ ಖಂಡ್ರೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಬೀದರ ಮಹಾನಗರ ಪಾಲಿಕೆ ಆಯುಕ್ತರಾದ ಮುಕುಲ್ ಜೈನ್ ಉಪಸ್ಥಿತರಿದ್ದರು.

# ಸಮಾನವಾಗಿ ಬದುಕುವ ಸಂವಿಧಾನಿಕ ಹಕ್ಕು ನೀಡಿದ ಡಾ. ಅಂಬೇಡ್ಕರ್



**ಜೇವರಗಿ,ಮೇ 15:** ಸಮಾಜದಲ್ಲಿ ಮನುಷ್ಯರು ಸಮಾನವಾಗಿ ಬದುಕಲು ಬದುಕುವ ಹಕ್ಕನ್ನು ಯಾವ ದೇವತೆಗಳೂ ಕೊಡಲಿಲ್ಲ. ಅದನ್ನು ಕೊಟ್ಟದ್ದು ಡಾ.ಬಿ ಆರ್ ಅಂಬೇಡ್ಕರ್ ಅವರ ಸಂವಿಧಾನ. ಜನರು ಮೌಢ್ಯದಿಂದ ಹೊರ ಬರಬೇಕು, ವೆಚಾರಿಕತೆಯನ್ನು ಬೆಳೆಸಿಕೊಳ್ಳಬೇಕು ಎಂದು ಪ್ರಾಂಶುಪಾಲೆ ಡಾ. ಶಾಂತಾ ಬಿ ಅಸ್ಟಿಗೆ ಹೇಳಿದರು .

ಅವರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಡಾ. ಬಿ. ಆರ್. ಅಂಬೇಡ್ಕರ್ ಸ್ಮರಣಾರ್ಥ ಸ್ಪರ್ಧಾಕೂಟದ ಸಮಾರೋಪ ಕಾರ್ಯಕ್ರಮ ದಲ್ಲಿ ಅಧ್ಯಕ್ಷ ಸ್ಥಾನದಿಂದ ಮಾತನಾಡಿದರು.

ಮುಖ್ಯ ಅತಿಥಿಯಾಗಿದ್ದ ಕಲಬುರಗಿಯ ನಿವೃತ್ತ ಮನೋವಿಜ್ಞಾನದ ಪ್ರಾಧ್ಯಾಪಕ ಆರ್. ವೆಂಕಟರಡ್ಡಿ ಮಾತನಾಡಿ, ಅಂಬೇಡ್ಕರ್ ಅವರು ತಮ್ಮ ಬುಡತನ, ಕಷ್ಟಕೋಟಲೆಗಳನ್ನೇ ಸಾಧನೆಗೆ ಮೆಟ್ಟಿಲುಗಳನ್ನಾಗಿಸಿಕೊಂಡರು. ವಿದ್ಯಾರ್ಥಿಗಳು ತಮ್ಮ ಭವಿಷ್ಯ ವನ್ನು ರೂಪಿಸಿಕೊಳ್ಳಲು ತಮ್ಮ ಅಗತ್ಯಗಳನ್ನು ಮರೆತು ಶಿಕ್ಷಣ ಪಡೆಯಬೇಕು. ಅಂಬೇಡ್ಕರ್ ಅವರನ್ನು ಚೆನ್ನಾಗಿ ಓದಿ ಮಾಡಿಕೊಳ್ಳಬೇಕು ಎಂದು ನುಡಿದರು.

ಕಾರ್ಯಕ್ರಮದಲ್ಲಿ ಸಿಬ್ಬಂದಿ ಕಾರ್ಯದರ್ಶಿ ಡಾ. ಖಾಜಾವಲಿ ಈಚನಾಳ, ಐಕ್ಯುಎಸಿ ಸಂಯೋಜಕ ಡಾ. ಸಂದೀಪ್ ತಿವಾರಿ, ಡಾ. ರಾಬಿಯಾ ಬೇಗಂ, ಡಾ. ಎನ್ ಜಿ ಶ್ರೀಧರ್, ಡಾ. ಖತೇಜಾ ನಸ್ರಿನ್, ಡಾ. ಶಿಲ್ಪಾ ಜೆ. ಡಾ. ಶರಣಪ್ಪ ಗುಂಡಗುರ್ತಿ, ಕುಪೇಂದ್ರ, ರೂಪಾ ಕುಲಕರ್ಣಿ, ಮೋಹನ್ ಬೆಲಪತ್ತಾರ್ ಇನ್ನಿತರರು ಹಾಜರಿದ್ದರು.

ಡಾ. ಬಿ ಆರ್ ಅಂಬೇಡ್ಕರ್ ಸ್ಮರಣಾರ್ಥ ಸ್ಪರ್ಧಾ ಕೂಟದ ಸಂಚಾಲಕ ಭೀಮಣ್ಣ ಬೆಡಕಪಳ್ಳಿ ಸ್ವಾಗತಿಸಿ ಪ್ರಾಸ್ತಾವಿಕ ನುಡಿದರು. ಡಾ. ರಾಜಶೇಖರ್ ಹಡಪದ್ ನಿರೂಪಿದರು. ಡಾ. ರಾಮುಲು ವಂದಿಸಿದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ಬಹುಮಾನಗಳನ್ನು ವಿತರಿಸಲಾಯಿತು.

# ಇಂಜಿಯನ್ ನಲ್ಲಿ ತಾಂತ್ರಿಕ ದೋಷ, ಗದಗ ಕಣಗಿನಹಾಳ ಬಳಿ ನಿಂತ ರೈಲು..!

**ಗದಗ, ಮೇ.15:** ಎರೆಡು ತಾಸು ನಿಂತಲ್ಲೇ ನಿಂತಿದ್ದ ಯಶವಂತಪುರ–ವಿಜಯಪುರ ರೈಲು. ರಾತ್ರಿ ಯಶವಂತಪುರದಿಂದ ಹೊರಟು 11 ಗಂಟೆಗೆ ವಿಜಯಪುರ ತಲುಪಬೇಕಿದ್ದ ರೈಲು. ಕೊಪ್ಪಳದ ತಳಕಲ್ ಬಳಿ ಇಂಜಿಯನ್ ನಲ್ಲಿ ದೋಷ ಕಂಡುಬಂದ ಬಗ್ಗೆ ಮಾಹಿತಿ. ಸ್ವಲ್ಪ ದೂರ ಕ್ರಮಿಸಿ ಕಣಗಿನಹಾಳ ಬಳಿ ರೈಲು ನಿಂತಿತ್ತು.

ತ ಗದಗ, ಬಾಲಕೋಟೆ, ವಿಜಯುಪುರ ತಲುಪಬೇಕಿತ್ತು ಪ್ರಯಾಣಿಕರು. ಗದಗನಿಂದ ಪ್ರತ್ಯೇಕ ರೈಲು ಇಂಜಿಯನ್ ತಂದು ನಿಂತ ರೈಲುನ್ನು ತೆಗೆದುಕೊಂಡು ಹೋಗಿದೆ.



# ಡಾ.ಫಾರುಕ್ ಮಣ್ಣೂರ ಶಿಘ್ರದಲ್ಲಿಯೆ ಖರ್ಗೆ ನೇತೃತ್ವದಲ್ಲಿ ಕಾಂಗ್ರೆಸ್ ಸೇರ್ಪಡೆ: ಜಗದೇವ ಗುತ್ತೇದಾರ




**ಕಲಬುರಗಿ,ಮೇ.15–**ಮಣ್ಣೂರ ಮಲ್ಟಿಸ್ಪೇಷಾಲಿಟಿ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಫಾರುಕ್ ಮಣ್ಣೂರ ಅವರು ಕಡಿಮೆ ಅವಧಿಯಲ್ಲಿ ಚಿಕಿತ್ಸೆ ಮೂಲಕ ಹಾಗೂ ಸಮಾಜ ಸೇವೆ ಮೂಲಕ ಕಡಿಮೆ ಅವಧಿಯಲ್ಲಿ ಜನರ ವಿಶ್ವಾಸ ಸಂಪಾದನೆ ಮಾಡಿದ್ದಾರೆ ಶಿಘ್ರದಲ್ಲಿಯೆ ದಿನಾಂಕ ನಿಗದಿ ಮಾಡಿ ಡಾ. ಫಾರುಕ್ ಮಣ್ಣೂರ ಅವರಿಗೆ ಸಚಿವ ಪ್ರಿಯಾಂಕ ಖರ್ಗೆ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡು ಪಕ್ಷದಲ್ಲಿ ಒಳ್ಳೆ ಸ್ಥಾನ ನೀಡುತ್ತೇವೆ ಎಂದು ಎಮ್.ಎಲ್.ಸಿ ಹಾಗೂ ಜಿಲ್ಲಾ ಕಾಂಗ್ರೇಸ್ ಸಮಿತಿ ಅಧ್ಯಕ್ಷರಾದ ಜಗದೇವ ಗುತ್ತೇದಾರ ಅವರು ಹೇಳಿದ್ದರು.

ಕಲಬುರಗಿ ನಗರದಲ್ಲಿ ಡಾ. ಫಾರುಕ ಮಣ್ಣೂರ ಅಭಿಮಾನಿ ಬಳಗದಿಂದ ಡಾ.ಫಾರುಕ್ ಮಣ್ಣೂರ ಅವರ 39ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ಸೇವಾ ಸಂಕಲ್ಪ ದೀವಸ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ ನಿಮ್ಮಂತವರು ಜನಪರ, ಬಡವರ ಪರ , ಹಿಂದೂಳಿದವರ ಪರ ಕಾಳಜಿವುಳ್ಳವರು ರಾಜಕೀಯಕ್ಕೆ ಬಂದರೆ ಜನರಿಗೆ ಸಾಮಜಿಕ ನ್ಯಾಯ ನೀಡಲು ಸಾಧ್ಯ, ಕಾಂಗ್ರೆಸ್ ಪಕ್ಷದ ಸಿದ್ದಾಂತ ಕೂಡ ಬಡವರ ಪರಾಗಿದ್ದು ನೀವು ಬಡವರ ಪರ ಕಾಳಜಿ ವುಳ್ಳವರಾಗಿದ್ದು ನಿಮ್ಮಂಥವರ ಅವಶ್ಯಕತೆ ಪಕ್ಷಕ್ಕೆ ಇದೆ ಎಂದರು.

ಜನ್ಮದಿನದ ಪ್ರಯುಕ್ತ ಸುಕನ್ಯಾ ಸಮೃದ್ಧಿ ಯೋಜನೆ ಅಡಿಯಲ್ಲಿ 200 ಹೆಣ್ಣು ಮಕ್ಕಳ 18 ವರ್ಷಗಳವರೆಗೆ ಅವರ ಕಂತನ್ನು ಪಾವತಿಸುತ್ತಿದ್ದಿರಿ, 2025 ನೆ ಸಾಲಿನಲ್ಲಿ ಉತ್ತಮವಾಗಿ ತೇರ್ಗಡೆಯಾದ 10 ವಿದ್ಯಾರ್ಥಿಗಳಿಗೆ ತಲಾ ರೂ.10000– ವಿದ್ಯಾರ್ಥಿವೇತನ ನೀಡುರಿವುದು, ಐಎಎಸ್/ಕೆಎಎಸ್ ವಿದ್ಯಾರ್ಥಿಗಳಿಗೆ ಪುಸ್ತಕಗಳ ವಿತರಣೆ ಮಾಡಿರುವುದು, ಕಲಬುರಗಿ ಜಿಲ್ಲೆಯ 15 ಜನ ವಿಧವೆಯರಿಗಾಗಿ ಬಟ್ಟೆ ಹೊಲಿಯುವ ಯತ್ರ ವಿತರಣೆ , ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 11 ಜನ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸೇರಿದಂತೆ ಅನೇಕ ಬಡವರ ಪರ ಕಾಳಜಿ ವುಳ್ಳಕಾರ್ಯಕ್ರಮ ಆಯೋಜನೆ ಮಾಡಿರುವುದು ಶ್ಲಾಘನೀಯ ಎಂದರು.

ಮಣ್ಣೂರ ಆಸ್ಪತ್ರೆಯ ಮುಖ್ಯಸ್ಥ ಡಾ. ಫಾರುಕ್ ಮಣ್ಣೂರ ಮಾತನಾಡಿ ಇಂದು ಪ್ರತಿಯೊಬ್ಬ ಪೊ?ಷಕರು ಹೇಣ್ಣು ಮಗುವಿಗೆ ಗುಣಮಟ್ಟದ ಶಿಕ್ಷಣ ನೀಡಿ ವಿದ್ಯಾವಂತರಾಗಿ ಮಾಡಿದಾರೆ ಆ ಹೇಣ್ಣು ಮಗು ಇಡಿ ಕುಟುಂಬಕ್ಕೆ ವಿದ್ಯಾವಂತರನ್ನಾಗಿ ಮಾಡುತ್ತದೆ , ಆದಕರಣ ಹೇಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರತಿಯೊಬ್ಬರು ಫ್ರೋಸ್ತಹಿಸಬೇಕು ಎಂದರು. ಮಣ್ಣೂರ ಆಸ್ಪತ್ರೆ ಪ್ರಾರಂಭವಾದಗಿನಿಂದ ನಾನು ಕಲಬುರಗಿ ಜಿಲ್ಲೆಯ 750 ಕ್ಷಯ ರೋಗಿಗಳಿಗೆ ದತ್ತು ಪಡೆದು ಪೌಷ್ಠಿಕ ಆಹರ ವಿತರಣೆ ಮಾಡಲಾಗುತ್ತಿದೆ, ಕಲಬುರಗಿ ಜಿಲ್ಲಾದ್ಯಂತ ಉಚಿತವಾಗಿ ಕುಡಿಯುವ ನೀರು ಪೂರೈಸಲಾಗುತ್ತಿದೆ, ಮಧುಮೇಹ ಮುಕ್ತ ಕಲಬುರಗಿ ಉದ್ದೇಶದಿಂದ ಉಚಿತವಾಗಿ ಮಧೂಮೇಹ ತಪಾಸಣೆ ಅಭೀಯಾನ ಹಮ್ಮಿಕೋಳ್ಳಲಾಗಿದೆ , ಕಲಬುರಗಿ ಜಿಲ್ಲೆಯ ಸುಮಾರು 650 ಬಡ ಹೇಣ್ಣು ಮಕ್ಕಳಿಗೆ ಸುಕನ್ಯ ಸಮೃದ್ಧಿ ಯೋಜನೆ ಅಡಿಯಲ್ಲಿ ದತ್ತು ಪಡೆದು 18 ವರ್ಷಗಳ ವರೆಗೆ ಅವರ ಹಣದ ಕಂತ್ತನ್ನು ಆಸ್ಪತ್ರೆಯಿಂದ ಪಾವತಿಸಲಾಗುತ್ತಿದೆ ಸೇರಿದಂತೆ ಅನೇಕ ಸಮಾಜಿಕ ಕಾರ್ಯ ಮಾಡಿಕೊಂಡು ಬರುತ್ತಿದ್ದೇನೆ ಎಂದು ತಿಳಿಸಿದ್ದರು.

ಈ ಸಂದರ್ಭದಲ್ಲಿ ಶ್ರೀನಿವಾಸ ಸರಡಗಿಯ ಮಹಾಲಕ್ಷ್ಮಿ ಶಕ್ತಿ ಪೀಠದ ಡಾ. ಅಪ್ಪಾರಾವ ದೇವಿ ಮುತ್ಯಾ, ಜನಾಬ ಮೌಲಾನಾ ಅಲ್ತಾಫ ಪಟೇಲ್ ಸಾಹೆಬ್ , ಶ್ರೀ ಮೌನೇಶ್ವರ ಮಠ ಗಂಜಲ ಖೇಡದ ಪೂಜ್ಯ ಶ್ರೀ ನಾಗೇಶ ಮಾಣಿಕ ಅಪ್ಪಾಜಿ, ನಿಲಕಂಠರಾವ ಮೂಲಗೆ, ಡಾ. ಎಸ್. ಬಿ.ಕಾಮರಡ್ಡಿ, ಫರಾಜುಲ್ ಇಸ್ಲಾಂ. ಮರೆಪ್ಪ ಹಳ್ಳಿ, ಡಾ.ರವಿ ಚವ್ಹಾಣ. ಶರಣಬಸಪ್ಪ ಖೇಣಿ, , ಬಾಬುಮಿಯ್ಯ ಮಣ್ಣೂರ, ಡಾ. ಮತೀನ್, ಎಮ.ಡಿ.ಇಸ್ಮಾಯಿಲ್ , ಜಹೀರ್ ಶಹಾಬಾದ, ರಾಜೇಶ ಯಾನಾಗುಂಟಿ, ಆಮೀರ ನಿಂಬಾಳಕರ್, ಹರ್ಷಾ ಪಿಂಟು, ಹರೀಶ, ನಜೀರ್ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

ಡಾ. ಫಾರುಕ್ ಮಣ್ಣೂರ ಅವರ ಜನ್ಮದಿನದ ಪ್ರಯುಕ್ತ ಅವರ ಅಭಿಮಾನಿ ಬಳಗದ ವತಿಯಿಂಧ ಕಲಬುರಗಿ ನಗರದಲ್ಲಿರುವ ವೃದ್ಧಾಶ್ರಮದಲ್ಲಿ ಅನ್ನ ಸಂತರ್ಪಣೆ ಕಾರ್ಯಕ್ರಮ ಹಾಗೂ ಸರ್ಕಾರಿ ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ, ಸುಕನ್ಯಾ ಸಮೃದ್ಧಿ ಯೋಜನೆ ಅಡಿಯಲ್ಲಿ 200 ಹೆಣ್ಣು ಮಕ್ಕಳ 18 ವರ್ಷಗಳವರೆಗೆ ಅವರ ಕಂತನ್ನು ಪಾವತಿಸಲು ನಿರ್ದರಿಸಿದ್ದು ಅವರ ಖಾತೆಯ ಪಾಸ್ಬುಕ್ ವಿತರಣೆ, 2026 ನೆ ಸಾಲಿನಲ್ಲಿ ಉತ್ತಮವಾಗಿ ತೇರ್ಗಡೆಯಾದ 10 ಹೆಣ್ಣು ಮಕ್ಕಳಿಗೆ ತಲಾ ರೂ.10000– ವಿದ್ಯಾರ್ಥಿವೇತನ ವಿತರಣೆ, ಐಎಎಸ್/ ಕೆಎಎಸ್ ವಿದ್ಯಾರ್ಥಿಗಳಿಗೆ ಪುಸ್ತಕಗಳ ವಿತರಣೆ, ಕಲಬುರಗಿ ಜಿಲ್ಲೆಯ 10 ಜನ ವಿಧವೆಯರಿಗಾಗಿ ಬಟ್ಟೆ ಹೊಲಿಯುವ ಉಪಕರಣ ವಿತರಣೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 11 ಜನ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸೇರಿದಂತೆ ಅನೇಕ ಸಮಾಜಿಕ ಕಾರ್ಯಕ್ರಮ ಆಯೋಜನೆ ಮಾಡಿದ್ದರು.

ಬೈಕ್ ರ್ಯಾಲಿ: ಡಾ. ಫಾರುಕ್ ಮಣ್ಣೂರ ಅವರ ಜನ್ಮದಿನದ ಪ್ರಯುಕ್ತ ಅವರ ಅಭಿಮಾನಿ ಬಳಗದಿಂದ ಡಾ. ಫಾರುಕ್ ಅವರ ಬಾರಾಹಿಲ್ಸ್ ನಿವಾಸಿದಂದ ಕಾರ್ಯಕ್ರಮ ನಡೆಯುವ ತ್ರಿ ನೇಂತ್ರ ಕಲ್ಯಾಣ ಮಂಟಪದವರೆಗೆ 200 ಕ್ಕೂ ಬೈಕ ಗಳ ಮೂಲಕ ಬೃಹತ ಬೈಕ ರ್ಯಾಲಿ ಮಾಡಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE